MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ “ಇದು ರಾಷ್ಟ್ರದ ಧ್ವನಿ”

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 281 | ಭಾನುವಾರ : 24-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 281 | SUNDAY : 24-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಮತದಾರರ ಪಟ್ಟಿ ಪರಿಷ್ಕರಣೆ ಮಾಡಲು ಕೈ ನಾಯಕರಿಗೆ ಸುರ್ಜೇವಾಲ ಕಟ್ಟಪ್ಪಣೆ

**ಬೆಂಗಳೂರು, ಆ.23–** ಮುಂದಿನ 6 ತಿಂಗಳಲ್ಲಿ ನಡೆಯಬಹುದಾದ ಬಿಬಿಎಂಪಿ, ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯತ್ ಚುನಾವಣೆ ವೇಳೆಗೆ ಮತದಾರರ ಪಟ್ಟಿಯಲ್ಲಿನ ಲೋಪಗಳನ್ನು ಸರಿಪಡಿಸುವಂತೆ ಎಐಸಿಸಿ ಪ್ರಧಾನಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲ ರಾಜ್ಯದ ಪ್ರಮುಖ ನಾಯಕರಿಗೆ ಕಟ್ಟಪ್ಪಣೆ ಮಾಡಿದ್ದಾರೆ.



ರಾಜ್ಯದ ಪ್ರಮುಖ ನಾಯಕರೊಂದಿಗೆ ಮಹತ್ವದ ಸಭೆ ನಡೆಸಿರುವ ರಣದೀಪ್ ಸಿಂಗ್ ಸುರ್ಜೇವಾಲ, ಈ ಹಿಂದೆ ಲೋಕಸಭೆ ಹಾಗೂ ವಿಧಾನಸಭೆ ಚುನಾವಣೆಯಲ್ಲಾದ ಮತ ಪಟ್ಟಿಯಲ್ಲಿನ ಅಕ್ರಮಗಳು ಮರುಕಳಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಿದ್ದಾರೆ.ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸುವುದು ರಾಜ್ಯ ಚುನಾವಣಾ ಆಯೋಗದ ಜವಾಬ್ದಾರಿಯಾಗಿದ್ದು, ಮತದಾರರ ಪಟ್ಟಿ ಪರಿಷ್ಕರಣೆ ಸಂಪೂರ್ಣವಾಗಿ ರಾಜ್ಯ ವ್ಯಾಪ್ತಿಯ ಅಧಿಕಾರಿಗಳ ಹೊಣೆಯಾಗಿದೆ.

ಹೀಗಾಗಿ ಈ ಹಿಂದೆ ನಡೆದಿರುವ ಲೋಪಗಳನ್ನು ಸರಿಪಡಿಸುವ ಜೊತೆಗೆ ಕರಾರುವಾಕ್ಕಾದ ಮತದಾರರ ಪಟ್ಟಿ ಸಜ್ಜುಗೊಳ್ಳಬೇಕು. ಇದಕ್ಕೆ ಸಚಿವ ಸಂಪುಟದ ಸದಸ್ಯರು ಕಾಲಕಾಲಕ್ಕೆ ನಿಗಾವಹಿಸಬೇಕು ಎಂದು ಸಲಹೆ ನೀಡಿದ್ದಾರೆ.

ಪಕ್ಷದ ಬೂತ್‌ಮಟ್ಟದ ಕಾರ್ಯಕರ್ತರು ಮತದಾರರ ಪಟ್ಟಿಯಲ್ಲಿನ ಪರಿಷ್ಕರಣೆ ಬಗ್ಗೆ ಸದಾಕಾಲ ಎಚ್ಚರಿಕೆ ವಹಿಸಬೇಕು. ಈ ಹಿಂದೆ ಅಲ್ಪಸಂಖ್ಯಾತರ ಮತಗಳನ್ನು ಹಾಗೂ ಪರಿಶಿಷ್ಟರ ಮತಗಳನ್ನು ತೆಗೆದು ಹಾಕಿರುವುದು, ಅನ್ಯ ರಾಜ್ಯಗಳ ಮತದಾರರನ್ನು ಭಾರೀ ಪ್ರಮಾಣದಲ್ಲಿ ಸೇರ್ಪಡೆ ಮಾಡಿರುವುದು, ನಕಲಿ ಮತದಾರರ ಸಂಖ್ಯೆ ಹೆಚ್ಚಿರುವುದು ವ್ಯಾಪಕವಾಗಿತ್ತು.

ಜೊತೆಗೆ ಒಬ್ಬ ವ್ಯಕ್ತಿ ಎರಡಕ್ಕಿಂತಲೂ ಹೆಚ್ಚಿನ ಸ್ಥಳಗಳಲ್ಲಿ ಮತದಾರರ ಪಟ್ಟಿಯಲ್ಲಿ ತಮ ಹೆಸರು ನಮೂದಿಸಿ**(2ನೇಪುಟಕ್ಕೆ)**

## ಮಾಹಿತಿ ಸಂಗ್ರಹಿಸಲು ಆಗಮಿಸಿದ್ದ ಮಾಧ್ಯಮದವರಿಗೆ ಪ್ರಿನ್ಸಿಪಲ್ ನಿಂದನೆ

## ಕೊತ್ತದೊಡ್ಡಿ ಏಕಲವ್ಯ ವಸತಿ ಶಾಲೆಯ 34ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಸಾಂಕ್ರಾಮಿಕ ರೋಗ

**ಯುವ ಮಾರ್ಗ ಸುದ್ದಿ**

**ಅರಕೇರಾ,ಆ.23–**ಕೊತ್ತದೊಡ್ಡಿ ಏಕಲವ್ಯ ಮಾದರಿ ವಸತಿ ಶಾಲೆಯಲ್ಲಿ ಸಾಂಕ್ರಾಮಿಕ ರೋಗಗಳು ವ್ಯಾಪಕವಾಗಿದ್ದು, ಏಕಕಾಲಕ್ಕೆ ಸುಮಾರು 34 ಕ್ಕೂ ಹೆಚ್ಚು ಮಕ್ಕಳು ಶನಿವಾರ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ತಪಾಸಣೆಗೆ ಆಗಮಿಸಿದ್ದರು.



ವಿದ್ಯಾರ್ಥಿಗಳಿಗೆ ತಲೆ ಸುತ್ತುವುದು, ಶೀತ, ಕೆಮ್ಮು, ಜ್ವರ ಕಾಣಿಸಿಕೊಂಡಿದೆ. ಶಾಲೆಯಲ್ಲಿ ವೈದ್ಯಕೀಯ ಸೇವೆಗಳು ಲಭ್ಯವಿದ್ದರೂ ಮಕ್ಕಳು ಅನಾರೋಗ್ಯದಿಂದ ಗುಣಮುಖರಾಗಿಲ್ಲ. ಒಬ್ಬರಿಂದ ಒಬ್ಬರಿಗೆ ಸಾಂಕ್ರಾಮಿಕ ರೋಗಗಳು ಹರಡಿದೆ ಎಂದು ಹೇಳಲಾಗುತ್ತಿದೆ.

ಇದರಿಂದ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಗಂಟಲು ದ್ರವ, ರಕ್ತ ಪರೀಕ್ಷೆಗೆ ಒಳಪಡಿಸಲಾಗಿದೆ. ಅನೇಕ ವಿದ್ಯಾರ್ಥಿಗಳು ಕಳೆದ ಮೂರ್ನಾಲ್ಕು ದಿನಗಳಿಂದ ನಿರಂತರ ಚಿಕಿತ್ಸೆಗೆ ಒಳಪಟ್ಟಿದ್ದಾರೆ. ದಿನೇ ದಿನೇ ಪ್ರಕರಣಗಳು ಹೆಚ್ಚುತ್ತಿವೆ. ಸುಮಾರು ಹತ್ತಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಟೈಫಡ್ ದೃಢಪಟ್ಟಿದೆ. ಅನಾರೋಗ್ಯದಿಂದ ಚಿಕಿತ್ಸೆಗೆ ಒಳಗಾದ ಎಲ್ಲ ವಿದ್ಯಾರ್ಥಿಗಳನ್ನು ಪೋಷಕರೊಂದಿಗೆ ಮನೆಗೆ ಕಳಿಸಿದ್ದಾರೆ.

ತಹಸೀಲ್ದಾರ್ ಅಮರೇಶ ಬೀರಾದರ್ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಮಾಹಿತಿ ಪಡೆದರು. ವೈರಲ್ ಫಿವರ್ ನಿಂದ ಮಕ್ಕಳು ಅನಾರೋಗ್ಯಕ್ಕೆ ತುತ್ತಾಗಿದ್ದಾರೆ. ಪಾಲಕರು ಆತಂಕಪಡುವ ಅಗತ್ಯವಿಲ್ಲ ಎಂದು ಪತ್ರಿಕೆಗೆ ಪ್ರತಿಕ್ರಿಯಿಸಿದರು.

### ಅನುಚಿತ ವರ್ತನೆ ತೋರಿದ ಪ್ರಿನ್ಸಿಪಲ್

ಕೊತ್ತದೊಡ್ಡಿ ವಸತಿ ಶಾಲೆಯಲ್ಲಿ ಅನಾರೋಗ್ಯಕ್ಕೆ ತುತ್ತಾದ ವಿದ್ಯಾರ್ಥಿಗಳು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ತಪಾಸಣೆ ಮಾಡಿಸಿಕೊಳ್ಳುವ ಸಂದರ್ಭದಲ್ಲಿ ಮಾಧ್ಯಮದವರು ವಿಡಿಯೋ, ಫೋಟೊ ಚಿತ್ರಿಕರಿಸಿಕೊಂಡಿದ್ದರು. ಜವಬ್ದಾರಿಯುತ ಸ್ಥಾನದಲ್ಲಿದ್ದ ಪ್ರಿನ್ಸಿಪಲ್ ಸುರೇಶ ವರ್ಮಾ ಅವರು ಮಾಹಿತಿ ಮತ್ತು ಚಿತ್ರ ಸಂಗ್ರಹಕ್ಕೆ ಆಗಮಿಸಿದ್ದ ಮಾಧ್ಯಮದವರೊಂದಿಗೆ ಅನುಚಿತವಾಗಿ ವರ್ತಿಸಿದರು. ಮಾಧ್ಯಮದವರು ಲೋಫರ್ಸ್, ಉಪಯೋಗಕ್ಕೆ ಬಾರದವರು, ಇಡಿಯಟ್ಸ್ ನೀವೆನು ಮಾಹಿತಿ ಪಡಿಯುತ್ತೀರಿ. ದೇವದುರ್ಗ ಸಿರವಾರ ರಸ್ತೆ ಸರಿ ಇಲ್ಲ. ಆರೋಗ್ಯ ಇಲಾಖೆ ಸೇವೆ ಸರಿಯಿಲ್ಲ, ಜನಪ್ರತಿನಿಧಿಗಳು ಉಪಯೋಗವಿಲ್ಲ ಇಲ್ಲಿನ ವ್ಯವಸ್ಥೆ ಸರಿ ಇಲ್ಲ ಮೊದಲು ಅದರ ವರದಿ ಮಾಡಿ. ಇಲ್ಲಿ ಏನು ಮಾಡ್ಕೋತಿರಾ ಎಂದು ಮನಬಂದಂತೆ ಏರುಧ್ವನಿಯಲ್ಲಿ ಅಸಂವಿಧಾನಿಕ ಪದಗಳಿಂದ ಸಾರ್ವಜನಿಕರ ನಡುವೆ ಸುಮಾರು ಹದಿನೈದು ನಿಮಿಷ ಹಿಂದಿ ಮತ್ತು ಇಂಗ್ಲಿಷ್ ಭಾಷೆಯಲ್ಲಿ ನಿಂದಿಸಿದರು.



ತಹಸೀಲ್ದಾರ್ ಅಮರೇಶ ಬೀರಾದರ್ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಮಾಹಿತಿ ಪಡೆದರು.

## ಪ್ರೌಢ ಶಾಲೆಯ ಉಪ ಪ್ರಾಚಾರ್ಯರ ಅಮಾನತ್ತಿಗೆ ಒತ್ತಾಯಿಸಿ ಆ.26 ರಂದು ಧರಣಿ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಆ.23–**ಪಟ್ಟಣದ ಪದವಿ ಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ಉಪ ಪ್ರಾಚಾರ್ಯರನ್ನು ಅಮಾನತ್ತು ಮಾಡಬೇಕೆಂದು ಒತ್ತಾಯಿಸಿ 26 ಅಗಷ್ಟ 2025ರಂದು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಮುಂದೆ ಅನಿರ್ಧಿಷ್ಟಾವಧಿ ಧರಣಿ ಹಮ್ಮಿಕೊಳ್ಳುತ್ತೇವೆ ಎಂದು ಜಯ ಕರ್ನಾಟಕ ರಕ್ಷಣಾ ಸೇನೆ ತಾಲೂಕು ಘಟಕದ ಅಧ್ಯಕ್ಷ ಹನುಮಂತ ನಾಯಕ ತಿಳಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಶಾಲಾ ಸಮಯದಲ್ಲಿ ವಿದ್ಯಾರ್ಥಿಗಳನ್ನು ಇತರೆ ಕೆಲಸಕ್ಕೆ ಬಳಸಿಕೊಳ್ಳುತ್ತಿರುವುದಲ್ಲದೇ, ಅಪಾಯಕಾರಿ ಕೆಲಸಗಳಿಗೆ ಬಳಕೆ ಮಾಡಿಕೊಳ್ಳಲಾಗುತ್ತಿದೆ. ಶಾಲೆಯ ಕಂಪೌಂಡ್ ಬಿದ್ದು, 2 ವರ್ಷ ಕಳೆದರೂ ಕಂಪೌಂಡ್ ನಿರ್ಮಾಣಕ್ಕೆ ಮುಂದಾಗಿಲ್ಲ. ಶಾಲಾ ದಾಖಲಾತಿ ಕಳೆದ ವರ್ಷಕ್ಕಿಂತ ಕಡಿಮೆಯಾಗಿರುವುದು ಇವರ ನಿರ್ಲಕ್ಷ್ಯವೇ ಕಾರಣವಾಗಿದೆ. ಇದರಿಂದಾಗಿ ಸರ್ಕಾರಿ ಶಾಲೆಗಳು ಮುಚ್ಚುವ ಹಂತಕ್ಕೆ ಬಂದು ತಲುಪಿವೆ.

ಕಳೆದ 3 ವರ್ಷಗಳಿಂದ ಶಾಲಾ ಅಭಿವೃದ್ಧಿ ಸಮಿತಿ ರಚನೆ ಮಾಡಿಲ್ಲ. ಈ ಬಗ್ಗೆ ವಿಚಾರಿಸಿದರೆ ಅದನ್ನು ಕೇಳಲು ನಿವು ಯಾರು ಎಂದು ಉಢಾಫೆ ಉತ್ತರ ನೀಡು ತ್ತಿದ್ದಾನೆ. ಶೌಚಾಲಯಗಳು ಗಬ್ಬು ನಾರುತ್ತಿವೆ. ಶೌಚಾಲಯ **(2ನೇಪುಟಕ್ಕೆ)**

## ಐಸಿಡಿಎಸ್ ಸಮರ್ಪಕ ಜಾರಿಗೆ ಒತ್ತಾಯ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಆ.23–**ಐಸಿಡಿಎಸ್ ಯೋಜನೆ ಜಾರಿಯಾಗಿ 50 ವರ್ಷ ಕಳೆದಿವೆ. ಅದನ್ನು ಸರಳೀಕರಿಸಿ ಸಮರ್ಪಕವಾಗಿ ಜಾರಿಗೊಳಿಸಬೇಕು ಹಾಗೂ ಎಫ್‌ಆರ್‌ಎಸ್ ರದ್ದುಗೊಳಿಸಬೇಕೆಂದು ಒತ್ತಾಯಿಸಿ ಅಂಗನವಾಡಿ ಕಾರ್ಯಕರ್ತೆಯರು ಸಿಡಿಪಿಓ ಮೂಲಕ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರಿಗೆ ಮನವಿ ಸಲ್ಲಿಸಿದರು.





ಎಫ್‌ಆರ್‌ಎಸ್ ಕಡ್ಡಾಯಗೊಳಿಸುವ ಮೂಲಕ ಆಹಾರ ಭದ್ರತಾ ಕಾಯ್ದೆಯನ್ನು ಉಲ್ಲಂಘನೆ ಮಾಡಲಾಗುತ್ತಿದೆ. ಅಲ್ಲದೇ ಫಲಾನುಭವಿಗಳ ವೈಯಕ್ತಿಕ ಮಾಹಿತಿ ಸೋರಿಕೆಯಾಗಿ ಸೈಬರ್ ವಂಚನೆಗಳು ಹೆಚ್ಚಾಗುತ್ತಿವೆ. ಇದರಿಂದಾಗಿ ಮಾನವ ಅಭಿವೃದ್ಧಿ ಸೂಚಾಂಕದಲ್ಲಿ ಭಾರತ 135ನೇ ಸ್ಥಾನದಲ್ಲಿದೆ. ಆದ್ದರಿಂದ ಎಫ್‌ಆರ್‌ಎಸ್ ರದ್ದುಗೊಳಿಸಬೇಕು. ಕಾರ್ಯಕರ್ತೆಯರನ್ನು ಸಿ ಮತ್ತು ಡಿ ಗುಂಪಿನ ನೌಕರರೆಂದು ಪರಿಗಣಿಸಬೇಕು. ವೇತನ ಹೆಚ್ಚಿಸಬೇಕು ಇಲ್ಲವಾದಲ್ಲಿ ಕೇಂದ್ರ ಸಚಿವರ ಮನೆಯ ಮುಂದೆ ಅನಿರ್ಧಿಷ್ಟಾವಧಿ ಧರಣಿ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ಅಧ್ಯಕ್ಷರಾದ ಸರಸ್ವತಿ ಬಡಿಗೇರ, ಲಕ್ಷ್ಮೀನಗನೂರು, ಮಹೇಶ್ವರಿ, ನಾಗರತ್ನ, ರೇಣುಕಾ, ಸಂಗಯ್ಯಸ್ವಾಮಿ, ಮಲ್ಲನಗೌಡ, ಸುಮಂಗಲಾ, ರೇಣುಕಾ, ಚೆನ್ನಮ್ಮ, ನೀಲಮ್ಮ, ಸುವರ್ಣ, ರೇಖಾ, ಶರಣಮ್ಮ ಸೇರಿ ಇತರರು ಇದ್ದರು.

## ಎನ್‌ಎಸ್ ಫೌಂಡೇಷನ್‌ನಿಂದ ತರಬೇತಿಯೊಂದಿಗೆ ಉದ್ಯೋಗ ಮೇಳ ಕಾರ್ಯಕ್ರಮ

### ಎಲ್ಲರಿಗೆ ಹುಟ್ಟೂರಲ್ಲೆ ಉದ್ಯೋಗ ಸಿಗಬೇಕು ಎಂಬುದು ನನ್ನ ಕನಸು । ಉದ್ಯೋಗ ಸೃಷ್ಠಿಸುವ ಕೈಗಾರಿಕೋದ್ಯಮಗಳ ಸ್ಥಾಪನೆಗೆ ಪ್ರಯತ್ನ : ರವಿ ಬೋಸರಾಜು

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.23–**ನಮ್ಮ ರಾಯಚೂರಿನ ವಿದ್ಯಾರ್ಥಿಗಳು, ಯುವಕರು ಹುಟ್ಟೂರಿನಲ್ಲಿಯೇ ಶಿಕ್ಷಣ ಪಡೆದು ಇಲ್ಲಿಯೇ ಉದ್ಯೋಗ ಮಾಡಬೇಕೆಂಬ ದೊಡ್ಡ ಕನಸಿದೆ. ಬೇರೆಡೆಗೆ ಹೋಗಿ ಉದ್ಯೋಗಕ್ಕಾಗಿ ಅಲೆದಾಟ ತಪ್ಪಿಸಲು ಜಿಲ್ಲೆಯಲ್ಲಿ ಉದ್ಯೋಗ ಸೃಷ್ಠಿಸುವ ಕೈಗಾರಿಕೋದ್ಯಮಗಳ ಸ್ಥಾಪನೆಗೆ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತಿದ್ದೇನೆ. ಕೈಗಾರಿಕೆಗಳ ಸ್ಥಾಪನೆ ಕುರಿತು ಸರ್ಕಾರಕ್ಕೆ ಮನವಿ ಮಾಡಲಾಗುವುದು ಎಂದು ಕಾಂಗ್ರೆಸ್ ರಾಜ್ಯ ಯುವ ಮುಖಂಡರಾದ ರವಿಬೋಸರಾಜು ಅವರು ತಿಳಿಸಿದರು.





ರಾಯಚೂರಿನ ಪಂಡೀತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹಾಗೂ ಡಾ. ಬಿ ಆರ್ ಅಂಬೇಡ್ಕರ್ ಭವನದಲ್ಲಿ ಎನ್‌ಎಸ್ ಬೋಸರಾಜು ಫೌಂಡೇಶನ್ ಹಾಗೂ 1 ಎಂ 1 ಬಿ ಸಹಯೋಗದೊಂದಿಗೆ ಆಯೋಜಿಸಿದ್ದ ಎರಡು ದಿನದ ಔದ್ಯೋಗಿಕ ತರಬೇತಿ ಕಾರ್ಯಗಾರ ಹಾಗೂ ಒಂದುದಿನದ ಉದ್ಯೋಗ ಮೇಳ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಯುವಕ, ಯುವತಿಯರು ದೂರದ ಮಹಾ ನಗರಗಳಿಗೆ ಹೋಗಿ ಉದ್ಯೋಗ ಮಾಡುವಾಗ ಪಾಲಕರ ಕಷ್ಟ ನನಗೆ ಗೊತ್ತಿದೆ. ಈ ಪಾಲಕರ ಹಾಗೂ ಯುವಕ, ಯುವತಿಯರ ಕಷ್ಟ ತಪ್ಪಿಸಲು ಇಲ್ಲಿಯೇ ಉದ್ಯೋಗ ಸೃಷ್ಠಿಯಾಗಬೇಕು ಹಾಗಾಗಿ ನಮ್ಮ ಫೌಂಡೇಷನ್ ನಿಂದ ಉದ್ಯೋಗ ಸೃಷ್ಠಿಗೆ ಮೊದಲ ಆದ್ಯತೆ ನೀಡುತ್ತಿದ್ದೇವೆ.

ಈ ಉದ್ಯೋಗ ಮೇಳದಲ್ಲಿ ಉದ್ಯೋಗ ದೊರೆತ ಅಭ್ಯರ್ಥಿಗಳು ಸಂಸ್ಥೆಯೊಂದಿಗೆ ವಿಶ್ವಾಸರ್ಹತೆ ಗಳಿಸಿ ಉನ್ನತ ಮಟ್ಟದ ಸ್ಥಾನಕ್ಕೇರಲು ಪ್ರಮಾಣಿಕವಾಗಿ ನಿಮಗೆ ಕೆಲಸಮಾಡಿ ನಮಗೆ ಕೆಲಸ ನೀಡಿದ ಕಂಪನಿಯ ಘನತೆಯನ್ನು ಹೆಚ್ಚಿಸಬೇಕು.

ಉದ್ಯೋಗ ಆಕಾಂಕ್ಷಿಗಳು ಕಂಪನಿಗಳಿಗೆ ಸಂದರ್ಶನ ನೀಡಿದಾಗ ಉದ್ಯೋಗ ಸಿಗದಿದ್ದರೆ ಚಿಂತೆ ಪಡಬೇಡಿ ನಮ್ಮಲ್ಲಿ ನಿಮ್ಮ ಸಂಪೂರ್ಣ ಡಾಟಾ ಇರುತ್ತದೆ ಮುಂದಿನ ದಿನದಲ್ಲಿ ನಿಮಗೆ ಮೊದಲ ಆದ್ಯತೆ ನೀಡಲಾಗುವುದು. ಅವಶ್ಯವಿದ್ದಲ್ಲಿ ಸಂಪರ್ಕಿಸಿ ಉದ್ಯೋಗ ಕೊಡಿಸುವ ಪ್ರಯತ್ನ ಮಾಡುತ್ತೇವೆ ಎಂದರು.

ರಾಯಚೂರಿನಲ್ಲಿ ಗಂಜ್ ಕೃಷಿ ಉತ್ಪನ್ನ ಮಾರುಕಟ್ಟೆ, ಹತ್ತಿ ಮಾರುಕಟ್ಟೆ, ವೈಟಿಪಿಎಸ್, ಆರ್ಟಿಪಿಎಸ್ ಇನ್ನಿತರ ಕೈಗಾರಿಕೆಯ ಉದ್ಯಮಗಳಿಂದ ನೂರಾರು ಕೋಟಿಯ ವ್ಯವಹಾರವಾಗುತ್ತಿದೆ. ಇನ್ನು ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಸೃಷ್ಠಿಸುವ ದೊಡ್ಡ ದೊಡ್ಡ ಕಂಪನಿಗಳ ಸ್ಥಾಪನೆಯಾಗಬೇಕಿದೆ ಅದಕ್ಕೆ ನಿಮ್ಮೆಲ್ಲರ ಸಹಕಾರ ಒತ್ತಾಯ ಬೇಕು ಎಂದು ತಿಳಿಸಿದರು.

ನಂತರ 1 ಎಂ 1 ಬಿ ಯ ಸಂಚಾಲಕರಾದ ದೀಪಿಕಾ ಮಾತನಾಡಿ, ಕಳೆದು ಎರಡು ದಿನಗಳಿಂದ ನಾವು ಉದ್ಯೋಗ ಆಕಾಂಕ್ಷಿಗಳಿಗೆ ತರ ’ಬೇತಿ ನೀಡುತ್ತಿದ್ದೇವೆ ಅನೇಕ ವಿದ್ಯಾರ್ಥಿಗಳು ಅವರ ಕೌಶಲ್ಯದ ಬಗ್ಗೆ ನಮಗೆ ತಿಳಿಸಿದ್ದಾರೆ. ಅಲ್ಲದೆ ನಿನ್ನೆ ಒಬ್ಬ ಅಂಗವಿಕಲ ನಮ್ಮ ಬಳಿಗೆ ಬಂದು ಮಾತನಾಡಿ, ನಾನು ಅಂಗವಿಕಲನಿದ್ದೇನೆ ದುಡಿಯದಿದ್ದರೆ ಬದುಕಲು ಸಾಧ್ಯವಿಲ್ಲ ಹಾಗಾಗಿ ನನ್ನ ಅಂಗ **(2ನೇ ಪುಟಕ್ಕೆ)**

## ಆ.25 ರಂದು ಲಯನ್ಸ್ ಕ್ಲಬ್ ಮತ್ತು ಅಶ್ವನಿ ಆಸ್ಪತ್ರೆಯ ಸಹಭಾಗಿತ್ವದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.23–**ಲಯನ್ಸ್ ಕ್ಲಬ್ ಆಫ್ ಮಾನ್ವಿ ಮತ್ತು ಅಶ್ವನಿ ಮಲ್ಟಿಸ್ಪೆಷಾಲಿಟಿ ಹಾಸ್ಪಿಟಲ್ ಸಹಭಾಗಿತ್ವದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಇದೇ ದಿನಾಂಕ 25-8-2025 ಸೋಮವಾರ ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯ ವರೆಗೆ ಅಶ್ವನಿ ಆಸ್ಪತ್ರೆಯಲ್ಲಿ ಹಮ್ಮಿಕೊಳ್ಳಲಾ ಗಿದೆ ಎಂದು ಲಯನ್ಸ್ ಕ್ಲಬ್ ಅಧ್ಯಕ್ಷರಾದ ಎಂ. ನಾಗರಾಜ ಹಾಗೂ ಅಶ್ವನಿ ಆಸ್ಪತ್ರೆಯ ವೈದ್ಯರಾದ ಡಾ.ಅಶ್ವನಿಕಾಂತ ತಿಳಿಸಿದ್ದಾರೆ.

ಈ ಶಿಬಿರದಲ್ಲಿ ಅಶ್ವನಿ ಆಸ್ಪತ್ರೆಯ ಜನರಲ್ ಮೆಡಿಸಿನ್ ತಜ್ಞೆ ವೈದ್ಯೆ ಡಾ.ರಮ್ಯ ವೀರವಲ್ಲಿ ಇವರು ಭಾಗವಹಿಸಿ ಉಚಿತವಾಗಿ ತಪಾಸಣೆ ಕೈಗೊಳ್ಳಲಿದ್ದಾರೆ. ವಿಶೇಷವಾಗಿ ಎಲ್ಲಾ ತರಹದ ವಿಷಮ ಜ್ವರ, ಸಕ್ಕರೆ ಕಾಯಿಲೆ, ಥೈರಾಡ್, ಶ್ವಾಸಕೋಶ ಕಾಯಿಲೆ, ಪಾರ್ಶರ್ವಾಯು, ಹೃದಯ ರೋಗ, ನರಗಳ ದೌರ್ಬಲ್ಯ, ಗ್ಯಾಸ್ಟಿಕ್ ಸಮಸ್ಯೆ, ಕಿಡ್ನಿ ಸಮಸ್ಯೆ ಇನ್ನಿತರ ಕಾಯಿಲೆಗಳಿಗೆ ತಪಾಸಣೆ ನಡೆಸಿ ಸೂಕ್ತ ಮಾಹಿತಿ ನೀಡಲಿದ್ದಾರೆ.

ತಪಾಸಣೆ ವೇಳೆ ವ್ಯಕ್ತಿಗೆ ಮೇಲಿನ ಯಾವುದೇ ರೋಗ ಲಕ್ಷಣಗಳು ಕಂಡುಬಂದಲ್ಲಿ ಉಚಿತವಾಗಿ ಇಸಿಜಿ ಪರೀಕ್ಷೆ, ಶುಗರ ಪರೀಕ್ಷೆ, ರಕ್ತ ಪರೀಕ್ಷೆ, ಸಿರಮ್ ಕ್ರಿಯಾಟಿನ್ (ಕಿಡ್ನಿ ಪರೀಕ್ಷೆ), ಶ್ವಾಸಕೋಶ ಎಕ್ಸರೇ, ಹೆಚ್.ಬಿ.ಎ1 ಸಿ ಪರೀಕ್ಷೆಗಳನ್ನು ಉಚಿತವಾಗಿ ಮಾಡಲಾಗುವುದು. ಹಾಗೆಯೇ ಉಚಿತವಾಗಿ ಔಷಧಿಗಳನ್ನು ವಿತರಣೆ ಮಾಡಲಾಗುವುದು.

ಆದ್ದರಿಂದ ಮಾನ್ವಿ ನಗರ ಹಾಗೂ ಗ್ರಾಮೀಣ ಪ್ರದೇಶದ ಸಾರ್ವಜನಿಕರು ಈ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕೆಂದು ಎಂ.ನಾಗರಾಜ ಮತ್ತು ಡಾ.ಅಶ್ವನಿಕಾಂತ ಕೋರಿದ್ದಾರೆ.ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ಬರುವ ರೋಗಿಗಳಿಗೆ ಮಧ್ಯಾಹ್ನ ಊಟದ ವ್ಯವಸ್ಥೆ ಮಾಡಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ.ನಂ. 9964810100, 9008403224, 9880894322, 9902409198, 8073046731, 9535607038ಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೊದಲನೇಯ ಪುಟದಿಂದ

# ಮತದಾರರ ಪಟ್ಟಿ ಪರಿಷ್ಕರಣೆ ಮಾಡಲು ಕೈ ನಾಯಕರಿಗೆ ಸುರ್ಜೇವಾಲ ಕಟ್ಟಪ್ಪಣೆ

ಕೊಂಡಿರುವುದು ವ್ಯಾಪಕವಾಗಿ ಕಂಡು ಬಂದಿದೆ. ಈ ರೀತಿಯ ಪ್ರಕರಣಗಳನ್ನು ಸರಿಪಡಿಸಬೇಕು ಎಂದು ಸುರ್ಜೇವಾಲ ಚರ್ಚೆ ನಡೆಸಿರುವುದಾಗಿ ತಿಳಿದು ಬಂದಿದೆ.ಜೊತೆಗೆ ಭವಿಷ್ಯದ ನಾಯಕರನ್ನು ಸೃಷ್ಟಿಸುವ ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ಹೆಚ್ಚಿನ ಕ್ಷೆ?ತ್ರಗಳಲ್ಲಿ ಕಾಂಗ್ರೆಸ್? ಅಭ್ಯರ್ಥಿಗಳು ಗೆಲ್ಲುವಂತೆ ನೋಡಿಕೊಳ್ಳಬೇಕು. ಪಕ್ಷ ಸಂಘಟನೆ, ಚುನಾವಣಾ ತಯಾರಿ ಎಲ್ಲದರಲ್ಲೂ ಎಚ್ಚರಿಕೆಯ ಹೆಜ್ಜೆ ಇಡಬೇಕು.

ಅಭ್ಯರ್ಥಿಗಳ ಆಯ್ಕೆಯಲ್ಲಿ ಪಕ್ಷನಿಷ್ಠರಿಗೆ ಆದ್ಯತೆ ನೀಡಬೇಕು. ವಲಸಿಗ ಅಭ್ಯರ್ಥಿ ಸಂಖ್ಯೆ ಶೇ. 10ಕ್ಕಿಂತ ಹೆಚ್ಚಿರಬಾರದು, ಅನಿವಾರ್ಯ ಸಂದರ್ಭದಲ್ಲಿ ಅನ್ಯ ಪಕ್ಷಗಳಿಂದ ಬಂದವರಿಗೆ ಟಿಕೆಟ್ ನೀಡಬೇಕಾದರೆ, ಸ್ಥಳೀಯ ನಾಯಕರ ಜೊತೆ ಸಮಾಲೋಚನೆ ನಡೆಸಿ, ಒಪ್ಪಿಗೆ ಪಡೆದುಕೊಳ್ಳುವುದು ಕಡ್ಡಾಯ ಎಂದು ರಣದೀಪ್‌ಸಿಂಗ್ ಸುರ್ಜೇವಾಲ ತಾಕೀತು ಮಾಡಿದ್ದಾರೆ.

ಸಂಪನೂಲ ಹೊಂದಾಣಿಕೆ ಹಾಗೂ ಕ್ಷೆ?ತ್ರವಾರು ಚುನಾವಣಾ ಉಸ್ತುವಾರಿಗೆ ನಿಯೋಜನೆಗೊಳ್ಳುವ ಸಚಿವರ ಮತ್ತು ಶಾಸಕರ ಪಟ್ಟಿಯನ್ನು ಸಿದ್ಧಪಡಿಸಿ ಈ ತಿಂಗಳ ಅಂತ್ಯದಲ್ಲಿ ಎಐಸಿಸಿಗೆ ಸಲ್ಲಿಸುವಂತೆ ಸುರ್ಜೇವಾಲ ಸೂಚನೆ ನೀಡಿದ್ದಾರೆ.ಹಲವು ದಿನಗಳಿಂದ ನನೆಗುದಿಗೆ ಬಿದ್ದಿರುವ ಬಿಬಿಎಂಪಿ ಜಿಲ್ಲಾಪಂಚಾಯಿತಿ, ತಾಲ್ಲೂಕು ಪಂಚಾಯಿತಿಗಳಿಗೆ ಚುನಾವಣೆ ನಡೆಸಲು ರಾಜ್ಯಸರ್ಕಾರ ತಯಾರಿ ನಡೆಸುತ್ತಿದೆ. ಈ ಹಿನ್ನೆಲೆಯಲ್ಲಿ ಸುರ್ಜೇವಾಲ ಸಭೆ ಮಹತ್ವ ಪಡೆದುಕೊಂಡಿದೆ.

# ಪ್ರೌಢ ಶಾಲೆಯ ಉಪ ಪ್ರಾಚಾರ್ಯರ ಅಮಾನತ್ತಿಗೆ ಒತ್ತಾಯಿಸಿ ಆ.26 ರಂದು ಧರಣಿ

ಸ್ವಚ್ಛಗೊಳಿಸುತ್ತಿಲ್ಲ. ಶಾಲಾ ಅಭಿವೃದ್ಧಿಗಾಗಿ ಬಂದ ಅನುದಾನ ಏನು ಮಾಡುತ್ತಾರೆ ಎಂಬ ಅನುಮಾನ ಮೂಡುತ್ತಿದೆ. ಇದರ ಬಗ್ಗೆ ಸಮರ್ಪಕವಾದ ಮಾಹಿತಿಯನ್ನು ನೀಡುತ್ತಿಲ್ಲ.

ಆದ್ದರಿಂದ ಕೂಡಲೇ ಎಸ್‌ಡಿಎಂಸಿ ರಚನೆ ಮಾಡಬೇಕು. ಶಾಲಾ ಕಂಪೌಂಡ್ ನಿರ್ಮಿಸಬೇಕು ಹಾಗೂ ಬೇಜವ್ದಾರಿಯಿಂದ ವರ್ತಿಸುವ ಉಪ ಪ್ರಾಚಾರ್ಯರನ್ನು ಕೂಡಲೇ ಅಮಾನತ್ತು ಮಾಡಬೇಕೆಂದು ಒತ್ತಾಯಿಸಿ ಧರಣಿಯನ್ನು ಹಮ್ಮಿಕೊಳ್ಳುತ್ತಿದ್ದೇವೆ. ನಮ್ಮ ಬೇಡಿಕೆ ಈಡೇರಿಸುವವರೆಗೆ ಧರಣಿ ನಿರಂತರವಾಗಿರುತ್ತದೆ ಎಂದರು.

ಈ ಸಂದರ್ಭದಲ್ಲಿ ಸಂಘಟನೆಯ ಪ್ರವೀಣಕುಮಾರ, ನಿಂಗಪ್ಪ ರಾಮಲೂಟಿ, ಆದಪ್ಪ ನಾಯಕ, ಮಂಜುನಾಥ ನಾಯಕ, ಮಲ್ಲೇಶ ಗುರಿಕಾರ, ಅಮರೇಗೌಡ, ಮೋಹಿನ್, ರಾಯಪ್ಪ ನಾಯಕ, ಮಲ್ಲೇಶ ಗುರಿಕಾರ, ಮಾಳಪ್ಪ, ಶಿವುರೆಡ್ಡಿ, ಆದಪ್ಪ ಭೂಪೂರು ಸೇರಿ ಇತರರ ಇದ್ದರು.

# ಎನ್‌ಎಸ್ ಫೌಂಡೇಷನ್‌ನಿಂದ ತರಬೇತಿಯೊಂದಿಗೆ ಉದ್ಯೋಗ ಮೇಳ ಕಾರ್ಯಕ್ರಮ

ವೈಫಲ್ಯವಿದ್ದರೂ ನೀವು ನೀಡಿದ ಕೆಲಸ ಮಾಡುತ್ತೇನೆ. ನನಗೆ ಒಂದು ಅವಕಾಶ ಕೊಡಿಸಿ ಎಂ ದು ಕೇಳಿರುವುದು ನೋಡಿ ನಮ್ಮ ಈ ಫೌಂಡೇಷನ್ ಕೆಲಸ ಇನ್ನೊಬ್ಬರಿಗೆ ಸಹಕಾರಿಯಾಗಿದೆಯಲ್ಲ ಎಂಬ ಹಮ್ಮೆ, ಸಂತೋಷ ನಮಗೆ ಎಂದರು ಅಭಿಪ್ರಾಯ ವ್ಯಕ್ತಪಡಿಸಿದರು.

ನಿರುದ್ಯೋಗ ಸಮಸ್ಯೆ ನಿವಾರಣೆಗೆ, ಯುವಜನತೆ ಆರ್ಥಿಕ ಸ್ವಾವಲಂಬನೆ ಸಾಧಿಸಲು ಉದ್ಯೋಗ ಮೇಳಗಳು ಸಹಕಾರಿಯಾಗಿವೆ.

ರಾಯಚೂರು ಜಿಲ್ಲೆ ಅಭಿವೃದ್ಧಿ ಪಥದತ್ತ ಸಾಗಲು ಹೆಚ್ಚೆಚ್ಚು ಉದ್ಯೋಗಾವಕಾಶಗಳು ಸೃಷ್ಟಿಯಾಗಬೇಕು. ಉದ್ಯೋಗ ಸೃಷ್ಠಿಯಿಂದ ಆರ್ಥಿಕ ಬಲವರ್ಧನೆಗೆ ಅವಕಾಶ ಸಿಗಲಿದೆ. ಉದ್ಯೋಗ ಸೃಷ್ಟಿಗೆ ಪೂರಕವಾಗಿ ಆಯೋಜಿಸಿರುವ ಈ ಮೇಳದಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕೆಂದು ಉದ್ಯೋಗ ಆಕಾಂಕ್ಷಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ವೇದಾಂತ ಶಿಕ್ಷಣ ಸಂಸ್ಥೆಯ ರಾಕೇಶ ರಾಜಲಬಂಡಿ, ಶಾಹಿನ್ ಕಾಲೇಜಿನ ಸೈಯದ್ ಆದಿಲ್, 1 ಎಂ 1 ಬಿ ಸಂಚಾಲಕರಾದ ದೀಪಿಕಾ, ಶೃತಿ, ರಿಸ್ವಾನ್, ಕಾಂಗ್ರೆಸ್ ಮುಖಂಡರಾದ ಜಯವಂತರಾವ್ ಪತಂಗೆ, ನರಸಿಂಹಲು ಮಾಡಗಿರಿ, ಬಿ ರಮೇಶ್ ತಿಮ್ಮಾರೆಡ್ಡಿ, ತೇಜಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಜನವಾಡ ಶಿವ ಪಾರ್ವತಿ ಮಂದಿರದಲ್ಲಿ ತಿರಂಗಾ ಸಂಗೀತೋತ್ಸವ

**ಬೀದರ್,ಆ.23–**ಇತ್ತಿಚೀಗೆ ತಾಲೂಕಿನ ಜನವಾಡ ಗ್ರಾಮದ ಶಿವ ಪಾರ್ವತಿ ಮಂದಿರದಲ್ಲಿ ಮಂಗಲಾ ಮಹಿಳಾ ಗ್ರಾಮೀಣಾಭಿವೃದ್ಧಿ ಸಂಸ್ಥೆ ವತಿಯಿಂದ 2025–26ನೇ ಸಾಲಿನ ಸ್ವತಂತ್ರೋತ್ಸವದ ಅಂಗವಾಗಿ ಹರ್ ಘರ್ ತಿರಂಗಾ ಅಭಿಯಾನದ ಪ್ರಯುಕ್ತ ತಿರಂಗಾ ಸಂಗೀತೋತ್ಸವ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಸ್ಥಳಿಯ ಮುಖಂಡರಾದ ವೇದಮೂರ್ತಿ ಬಸವರಾಜ ಸ್ವಾಮಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಜಗತ್ತಿನ ಭಾವ್ಯಕ್ಯತೆ ಹಾಗೂ ಕೋಮು ಸಾಮರಸ್ಯ ಸಾರುವ ಎಕೈಕ ದೇಶ ನಮ್ಮದು. ನಮ್ಮ ತ್ರಿವರ್ಣ ಧ್ವಜದಲ್ಲಿ ಶಕ್ತಿ, ತ್ಯಾಗ ಹಾಗೂ ಬಲಿದಾನದ ಜೊತೆಗೆ ಹಸಿರು ಕ್ರಾಂತಿಯನ್ನುಂಟು ಮಾಡುವ ಔದಾರ್ಯ ಇದರಲ್ಲಿದ್ದು ನಾವೆಲ್ಲರು ಈ ಕಾರ್ಯಕ್ರಮದ ಮೂಲಕ ರಾಷ್ಟ್ರಪ್ರೇಮ, ದೇಶಭಕ್ತಿಗೆ ಗೌರವ ಕೊಡಬೇಕಾಗಿದೆ ಎಂದರು.



ನಿವೃತ್ತ ಪಿ.ಎಸ್.ಐ ಶಂಕರರಾವ ಶೀಲವಂತ ಮುಖ್ಯ ಅತಿಥಿಗಳಾಗಿ ಮಾತನಾಡಿದರು.ಸ್ಥಳಿಯ ಶಾಲೆಯ ಸಹ ಶಿಕ್ಷಕ ಸಚೀನ ಮಾತನಾಡಿದರು. ಮಂಗಲಾ ಮಹಿಳಾ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷೆ ಕು.ಮಂಗಲಾ ಮರಕಲೆ ಅಧ್ಯಕ್ಷತೆ ವಹಿಸಿದ್ದರು. ಎಕಂಬಾ ಗ್ರಾ.ಪಂ ಪಿಡಿಓ ಶಶಿಕುಮಾರ ಕಾರ್ಯ ಕ್ರಮದಲ್ಲಿದ್ದರು.

# ಕಾಯಂ ಉಪನ್ಯಾಸಕರ ನೇಮಕಾತಿಗೆ ಆಗ್ರಹಿಸಿ ಎಬಿವಿಪಿ ಪ್ರತಿಭಟನೆ




**'ಬೀದರ್,ಆ.23–**ಕರ್ನಾಟಕ ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾಯಂ ಉಪನ್ಯಾಸಕರ ಹಾಗೂ ಅರ್ಹ ಅತಿಥಿ ಉಪನ್ಯಾಸಕರ ನೇಮಕಾತಿ ಮಾಡುವಂತೆ ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಬೀದರ್ ಜಿಲ್ಲಾ ಘಟಕದ ವತಿಯಿಂದ ಇಂದು ಭಾರೀ ಪ್ರತಿಭಟನೆ ನಡೆಯಿತು.

ಬೀದರ್ ನಗರದಲ್ಲಿ ಅಂಬೇಡ್ಕರ್ ವೃತ್ತದಿಂದ ಶಿವಾಜಿ ವೃತ್ತದವರೆಗೆ ಪ್ರತಿಭಟನೆ ಮೆರವಣಿಗೆ ನಡೆಸಿ, ನಂತರ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ರಾಜ್ಯದ 432 ಪದವಿ ಕಾಲೇಜುಗಳಲ್ಲಿ 6,000 ಕಾಯಂ ಉಪನ್ಯಾಸಕರಲ್ಲಿ ಅರ್ಧಕ್ಕಿಂತ ಹೆಚ್ಚು ಮಂದಿ ನಿವೃತ್ತರಾಗಿದ್ದು, ಕೇವಲ 3,000 ಮಂದಿ ಮಾತ್ರ ಸೇವೆಯಲ್ಲಿ ಇದ್ದಾರೆ. ಉಳಿದ ಬೋಧನಾ ಜವಾಬ್ದಾರಿಗಳನ್ನು ಸುಮಾರು 12,000 ಅತಿಥಿ ಉಪನ್ಯಾಸಕರು ನಿರ್ವಹಿಸುತ್ತಿದ್ದಾರೆ. ಈ ಪರಿಸ್ಥಿತಿ ವಿದ್ಯಾರ್ಥಿಗಳ ಶಿಕ್ಷಣದ ಗುಣಮಟ್ಟಕ್ಕೆ ಧಕ್ಕೆಯಾಗಿದೆ ಎಂದು ಪ್ರತಿಭಟನಾಕಾರರು ಹೇಳಿದರು.

2025–26 ನೇ ಸಾಲಿನಲ್ಲಿ 12,000 ಅತಿಥಿ ಉಪನ್ಯಾಸಕರ ನೇಮಕಾತಿಗೆ 55,000ಕ್ಕೂ ಹೆಚ್ಚು ಅರ್ಜಿಗಳು ಬಂದಿದ್ದರೂ, ಇಂದಿಗೂ ನೇಮಕಾತಿ ಪ್ರಕ್ರಿಯೆ ಆರಂಭವಾಗದಿರುವುದರಿಂದ ವಿದ್ಯಾರ್ಥಿಗಳ ತರಗತಿಗಳು ಅಸ್ತವ್ಯಸ್ತವಾಗಿವೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

# ಸತತ ಮಳೆಯಿಂದ ಹಾನಿ ಪರಿಹಾರಕ್ಕೆ ಮಾಜಿ ಶಾಸಕ ಗುತ್ತೇದಾರ ಆಗ್ರಹ

ಯುವ ಮಾರ್ಗ ಸುದ್ದಿ

**ಆಳಂದ,ಆ.23–** ತಾಲೂಕಿನಲ್ಲಿ ಸತತವಾಗಿ 15 ದಿನಗಳಿಂದ ಸುರಿದ ಮಳೆಯಿಂದ ಅಪಾರ ಪ್ರಮಾಣದಲ್ಲಿ ಬೆಳೆ, ಆಸ್ತಿ ಪಾಸ್ತಿ ಹಾನಿಯಾಗಿರುವುದುರಿಂದ ಸರ್ಕಾರ ಕೂಡಲೇ ಪರಿಹಾರ ನೀಡಬೇಕು ಎಂದು ಮಾಜಿ ಶಾಸಕ ಸುಭಾಷ ಆರ್ ಗುತ್ತೇದಾರ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಉತ್ತಮ ಫಸಲಿನ ನಿರೀಕ್ಷೆಯಲ್ಲಿದ್ದ ರೈತರು ಈಗ ಕಂಗಲಾಗಿದ್ದಾರೆ. ಆಳಂದ ತಾಲೂಕಿನಲ್ಲಿ ವ್ಯಾಪಕ ಮಳೆ ಸುರಿದಿರುವುದರಿಂದ ಅಪಾರ ಪ್ರಮಾಣದ ಹಾನಿಯಾಗಿದೆ ಹಾನಿ ಸ್ಥಳಕ್ಕೆ ಅಧಿಕಾರಿಗಳು ಭೇಟಿ ನೀಡಿ ಸರ್ಕಾರಕ್ಕೆ ವರದಿ ನೀಡಲು ಆಗ್ರಹಿಸಿದ್ದಾರೆ.

ಮಳೆ ವ್ಯಾಪಕವಾಗಿ ಬಿದ್ದಿರುವುದರಿಂದ ತಾಲೂಕಿನ ನಾಗರಿಕರಿಗೆ ಅಪಾರ ಪ್ರಮಾಣದ ಹಾನಿಯ ಭೀತಿ ಎದುರಾಗಿದೆ. ರೈತರು ಹೆಚ್ಚಿನ ಪ್ರಮಾಣದಲ್ಲಿ ಹೆಸರು, ಉದ್ದು, ತೊಗರಿ ಬೆಳೆದಿದ್ದಾರೆ ಈಗ ಮಳೆಯಿಂದ ಹೆಸರು, ಉದ್ದು, ಸೋಯಾಬಿನ್ ಬೆಳೆಗಳು ಹಾಳಾಗಿವೆ. ಕಂದಾಯ ಇಲಾಖೆಯ ಅಧಿಕಾರಿಗಳು ಸಮಗ್ರ ಸಮೀಕ್ಷೆ ನಡೆಸಿ ಸರ್ಕಾರಕ್ಕೆ ವರದಿ ನೀಡಬೇಕು ಎಂದು ತಿಳಿಸಿದ್ದಾರೆ.

ಪ್ರಮುಖ ಇಲಾಖೆಗಳಾದ ಕೃಷಿ, ತೋಟಗಾರಿಕೆ, ಕಂದಾಯ ಇಲಾಖೆಯ ಅಧಿಕಾರಿಗಳು ಶೀಘ್ರದಲ್ಲಿ ರೈತರ ನೆರವಿಗೆ ಧಾವಿಸಬೇಕು ಅಲ್ಲದೇ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ ಇಲಾಖೆ, ಲೋಕೋಪಯೋಗಿ, ಸಣ್ಣ ನೀರಾವರಿ, ಇಂಧನ ಇಲಾಖೆ ಅಧಿಕಾರಿಗಳು ಮಳೆಯಿಂದ ಹಾನಿಗೀಡಾದ ರಸ್ತೆ, ಶಾಲಾ ಕಟ್ಟಡಗಳು, ಸರ್ಕಾರಿ ಕಟ್ಟಡಗಳು ಸೇರಿದಂತೆ ಇತರೆ ಕಟ್ಟಡಗಳ ದುರಸ್ತಿ ಮತ್ತು ಪುನರ ದುರಸ್ತಿ ಕಾರ್ಯದಲ್ಲಿ ತೊಡಗಬೇಕೆಂದು ಒತ್ತಾಯಿಸಿದ್ದಾರೆ.



ಇನ್ನೂ ಗ್ರಾಮ ಪಂಚಾಯತಗಳಲ್ಲಿ ಅಧಿಕಾರಿಗಳು ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಗ್ರಾಮೀಣ ಭಾಗದಲ್ಲಿ ಯಾವುದೇ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಮನವಿ ಮಾಡಿದ್ದಾರೆ.

ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಬೆಳೆಗಳು ಹಾನಿಗೊಳಗಾಗಿವೆ. ವಿಶೇಷವಾಗಿ ಜುಲೈ 15 ರಿಂದ ಆಗಸ್ಟ್ 20ರ ಅವಧಿಯಲ್ಲಿ ಸುರಿದ ಮಳೆಯಿಂದಾಗಿ ತೊಂದರೆ ಉಂಟಾಗಿದೆ. ಹಾಲು ಉತ್ಪಾದನೆ ಹಾಗೂ ದಿನಗೂಲಿ ಕಾರ್ಯಗಳಲ್ಲಿ ವ್ಯತ್ಯಯ ಉಂಟಾಗಿದ್ದು, ರೈತರ ಬದುಕು ಸಂಕಷ್ಟಕ್ಕೆ ತುತ್ತಾಗಿದೆ. ಬೆಳೆಹಾನಿಯ ಸಮಗ್ರ ಸರ್ವೆ ನಡೆಸಿ ಪ್ರತಿ ಏಕರೆಗೆ 25 ಸಾವಿರ ರೂಪಾಯಿ ಪರಿಹಾರ ಒದಗಿಸುವಂತೆ ಅವರು ಒತ್ತಾಯಿಸಿದ್ದಾರೆ.

ಬೆಳೆ ವಿಮೆ ಕೈಗೊಂಡ ರೈತರು ಬೆಳೆ ಹಾಳಾದ ಕುರಿತು ಕಂಪನಿಯ ಸಿಬ್ಬಂದಿಗಳಿಗೆ ಕರೆ ಮಾಡಿದರೆ ಕರೆ ಸ್ವೀಕರಿಸುತ್ತಿಲ್ಲ. ಭೇಟಿಯಾಗಿ ಸಮಸ್ಯೆ ತೋಡಿಕೊಂಡರೆ ಬೆಳೆ ಹಾಳಾದವರು ಅರ್ಜಿ ಕೊಡಿ ಎನ್ನುತ್ತಿದ್ದಾರೆ. ಎಲ್ಲಾ ರೈತರಿಗೆ ತಮ್ಮ ಕೆಲಸ ಬಿಟ್ಟು ಅರ್ಜಿ ಕೊಡಲು ಕಚೇರಿಗಳಿಗೆ ಅಲೆದಾಟ ಮಾಡಿಸುವುದು ಸರಿಯಲ್ಲ. ಪ್ರತಿ ಗ್ರಾ.ಪಂ. ಮಟ್ಟದಲ್ಲಿ ವಿಮಾ ಕಂಪನಿಯ ಸಿಬ್ಬಂದಿಗಳಿಂದ ಬೆಳೆ ಹಾನಿಯ ಅರ್ಜಿಗಳನ್ನು ಸ್ವೀಕರಿಸಿ ತಕ್ಷಣದ ಕ್ರಮ ಕೈಗೊಳ್ಳಬೇಕು. ಹೆಚ್ಚುವರಿಯಾಗಿ ಅಧಿಕಾರಿಗಳು ತಕ್ಷಣ ಸರ್ವೆ ಮಾಡಿ ಸರ್ಕಾರದ ಮಟ್ಟದಲ್ಲಿ ಪರಿಹಾರ ಘೋಷಿಸಬೇಕೆಂದು ಎಂದು ಅವರು ಒತ್ತಾಯಿಸಿದ್ದಾರೆ.

# ಮಾಸ್ಕ್ ಮ್ಯಾನ್ ಅರೆಸ್ಟ್

**ಮಂಗಳೂರು,ಆ.23–**ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂತಿಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಸುಕುಧಾರಿ ಸಿ.ಎನ್. ಚಿನ್ನಯ್ಯ ಅಲಿಯಾಸ್ ಚಿನ್ನಪ್ಪನನ್ನು ವಿಶೇಷ ಪೊಲೀಸ್ ತನಿಖಾ ತಂಡ ಇಂದು ಬೆಳಿಗ್ಗೆ ಬಂಧಿಸಿದೆ.

ಧರ್ಮಸ್ಥಳ ಗ್ರಾಮದಲ್ಲಿ ನೂರಾರು ಶವಗಳನ್ನು ಹೂತಿದ್ದೇನೆ ಎಂದು ಕತೆ ಕಟ್ಟಿ ಸುಳ್ಳುಗಳ ಸರಮಾಲೆ ಹೆಣೆದಿದ್ದ ಚಿನ್ನಯ್ಯನನ್ನು ಸತತ 19 ಗಂಟೆಗಳ ವಿಚಾರಣೆಯ ಬಳಿಕ ಎಸ್‌ಐಟಿ ಪೊಲೀಸರು ಬಂಧಿಸಿ ಬೆಳ್ತಂಗಡಿಯ ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದ ಮುಂದೆ ಹಾಜರುಪಡಿಸಿ ಹೆಚ್ಚಿನ ವಿಚಾರಣೆಗೆ ತಮ್ಮ ಕಸ್ಟಡಿಗೆ ನೀಡುವಂತೆ ನ್ಯಾಯಾಲಯಕ್ಕೆ ಮನವಿ ಮಾಡಿದ್ದು, ಎಸ್‌ಐಟಿ ಪೊಲೀಸರ ಮನವಿಯನ್ನು ಒಪ್ಪಿದ ನ್ಯಾಯಾಧೀಶರಾದ ವಿಜಯೇಂದ್ರ ಅವರು ಮುಸುಕುಧಾರಿ ಚಿನ್ನಯ್ಯನನ್ನು 10 ದಿನಗಳ ಕಾಲ ಎಸ್‌ಐಟಿ ಕಸ್ಟಡಿಗೆ ನೀಡಿದ್ದಾರೆ.

ಮುಸುಕುಧಾರಿ ಚಿನ್ನಯ್ಯನನ್ನು ಸತತ ಹಲವು ಗಂಟೆಗಳ ಬಳಿಕ ವಿಚಾರಣೆ ನಡೆಸಿ ಇಂದು ಬೆಳಿಗ್ಗೆ ಬಂಧಿಸಿದ ಎಸ್‌ಐಟಿ ಪೊಲೀಸರು ನ್ಯಾಯಾಲಯಕ್ಕೆ ಹಾಜರುಪಡಿಸುವ ಮುನ್ನ ಬಂಧಿತ ಚಿನ್ನಯ್ಯನನ್ನು ವೈದ್ಯಕೀಯ ಪರೀಕ್ಷೆಗೂ ಒಳಪಡಿಸಿದರು. ಬೆಳ್ತಂಗಡಿಯ ತಾಲ್ಲೂಕು ಆಸ್ಪತ್ರೆಯಲ್ಲಿ ಈತನ ವೈದ್ಯಕೀಯ ಪರೀಕ್ಷೆ ನಡೆಸಲಾಯಿತು.

ಬಂಧಿತ ಮುಸುಕುಧಾರಿ ಚೆನ್ನಯ್ಯ ಅಲಿಯಾಸ್ ಚಿನ್ನಪ್ಪ ಧರ್ಮಸ್ಥಳದಲ್ಲಿ ಶವ ಹೂತಿಟ್ಟಿದ್ದೇನೆ ಎಂದು ಬುರುಡೆಯನ್ನು ತಂದು ಪೊಲೀಸರಿಗೆ ನೀಡಿದ್ದ ಹೆಚ್ಚಿನ ವಿಚಾರಣೆಗಾಗಿ ವಿಶೇಷ ತನಿಖಾ ತಂಡವನ್ನು ಸರ್ಕಾರ ರಚಿಸಿತ್ತು. ಮುಸುಕುಧಾರಿ ಚಿನ್ನಯ್ಯನ ಹೇಳಿಕೆಯ ಮೇರೆಗೆ ವಿಶೇಷ ತನಿಖಾ ತಂಡ ಕಳೆದ ಕೆಲ ದಿನಗಳಿಂದ ಆತ ತೋರಿಸಿದ್ದ 17 ಸ್ಥಳಗಳಲ್ಲಿ ಭೂಮಿ ಅಗೆದು ಶವಗಳ ಶೋಧಕಾರ್ಯ ಮಾಡಿದ್ದರು.

ಎರಡು ಕಡೆಗಳಲ್ಲಿ ಅಸ್ಥಿ ಪಂಜರ ಸಿಕ್ಕಿದ್ದರೆ, ಮತ್ತೊಂದು ಜಾಗದಲ್ಲಿ ಮಾನವನ ಮೂಳೆ ಪತ್ತೆಯಾಗಿದ್ದವು. ಅದು ಬಿಟ್ಟರೆ ಈತ ಹೇಳಿದ ಸ್ಥಳಗಳಲ್ಲಿ ಯಾವುದೇ ಶವಗಳು ಸಿಕ್ಕಿರಲಿಲ್ಲ. ಬಳಿಕ ಎಸ್‌ಐಟಿ ಅಧಿಕಾರಿಗಳು ಭೂಮಿ ಅಗೆಯುವ ಕಾರ್ಯವನ್ನು ಸ್ಥಗಿತಗೊಳಿಸಿ ಮುಸುಕುಧಾರಿಯನ್ನೇ ವಿಚಾರಣೆಗೆ ಒಳಪಡಿಸಿದ್ದರು. ಎಸ್‌ಐಟಿಯ ಮುಖ್ಯಸ್ಥ ಡಿಜಿಪಿ ಪ್ರಣವ್‌ಮೊ ಹಾಂತಿ



ಸಮ್ಮುಖದಲ್ಲೇ ನಿನ್ನೆ ಮಧ್ಯಾಹ್ನ 2 ಗಂಟೆಯಿಂದಲೇ ಎಸ್‌ಐಟಿ ಪೊಲೀಸರ ತಂಡ ಎಸ್‌ಐಟಿ ಠಾಣೆಯಲ್ಲಿ ಮುಸುಕುಧಾರಿಯನ್ನು ತೀವ್ರವಿಚಾರಣೆಗೆ ಒಳಪಡಿಸಿ ದ್ದರು.ಮುಸುಕುಧಾರಿ ಸುಳ್ಳು ಹೇಳಿದ್ದ, ಕತೆ ಕಟ್ಟಿದ್ದ ಎಂಬುದು ಗೊತ್ತಾಗುತ್ತಿದ್ದಂತೆಯೇ ಎಸ್‌ಐಟಿ ಪೊಲೀಸರು ಮುಸುಕುಧಾ ರಿಯನ್ನು ಇಂದು ಬಂಧಿಸಿದ್ದಾರೆ.

ಮುಸುಕುಧಾರಿಯ ವಿಚಾರಣೆ ವೇಳೆ ಎಸ್‌ಐಟಿ ಪೊಲೀಸರು ನ್ಯಾಯಾಲಯಕ್ಕೆ ತಂದ ಬುರುಡೆ ಎಲ್ಲಿಯದು? ಸಮಾಧಿ ಒಳಗಿಂದ ತಂದಿರುವೆಯಾ? ಮುಸುಕುಧಾರಿಯ ಜತೆ ಯಾರೆಲ್ಲ ಇದ್ದಾರೆ ಎಂಬ ಬಗ್ಗೆ ಹಲವು ಪ್ರಶ್ನೆಗಳನ್ನು ಮುಸುಕುಧಾರಿಗೆ ಹಾಕಿದ್ದರು. ಎಸ್‌ಐಟಿ ಪೊಲೀಸರ ಪ್ರಶ್ನೆಗಳಿಗೆ ಮುಸುಕುಧಾರಿಯಿಂದ ಸಮರ್ಪಕ ಉತ್ತರ ಬಾರದ ಕಾರಣ ಆತನನ್ನು ಬಂಧಿಸಲಾಗಿದೆ.

**ನಾನು ಪಾತ್ರಧಾರಿ, ಸೂತ್ರಧಾರಿ ಬೇರೆ ಇದ್ದಾರೆ:** ಮುಸುಕುಧಾರಿ ಚಿನ್ನಯ್ಯ ಧರ್ಮಸ್ಥಳದ ಶವ ಹೂತಿಟ್ಟ ಪ್ರಕರಣದಲ್ಲಿ ನಾನು ಪಾತ್ರಧಾರಿ ಮಾತ್ರ ಸೂತ್ರಧಾರಿಗಳೆ ಬೇರೆಯೇ ಇದ್ದಾರೆ ಎಂದು ಸ್ಫೋಟಕ ಮಾಹಿತಿಯನ್ನು ಪೊಲೀಸರು ವಿಚಾರಣೆ ವೇಳೆ ಬಹಿರಂಗಗೊಳಿಸಿದ್ದಾನೆ.

ನನಗೆ ಬುರುಡೆ ತೆಗೆದುಕೊಂಡು ನ್ಯಾಯಾಲಯಕ್ಕೆ ಒಪ್ಪಿಸು ಎಂದರು. ನಾನು ಒಪ್ಪಿಸಿದೆ. ನ್ಯಾಯಾಲಯಕ್ಕೆ ಒಪ್ಪಿಸಿದ ಬುರುಡೆ ಎಲ್ಲಿಂದ ಬಂತು ನನಗೆ ಗೊತ್ತಿಲ್ಲ ಎಂದು ಮುಸುಕುಧಾರಿ ವಿಚಾರಣೆಯಲ್ಲಿ ತಿಳಿಸಿದ್ದಾನೆ ಎಂದು ಹೇಳಲಾಗಿದೆ.

# ಆನ್‌ಲೈನ್ ಗೇಮ್ ನಿಷೇಧ ಸ್ವಾಗತಾರ್ಹ

**ಕಲಬುರಗಿ,ಆ.23–** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಆನ್‌ಲೈನ್ ಗೇಮ್ ನಿಷೇಧ ಮಾಡಿರುವುದು ಸ್ವಾಗತಾರ್ಹವಾಗಿದೆ. ಇದು ಎಷ್ಟೋ ತಂದೆ ತಾಯಿಗಳಿಗೆ ಮತ್ತು ಕುಟುಂಬಗಳಿಗೆ ನೆಮ್ಮದಿ ತಂದಿದೆ ಎಂದು ಕನ್ನಡ ಭೂಮಿ ಜಾಗೃತಿ ಸಮಿತಿ ಜಿಲ್ಲಾಧ್ಯಕ್ಷ ಆನಂದ ತೆಗನೂರ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ದೇಶದಲ್ಲಿ ಆನ್‌ಲೈನ್ ಗೇಮ್ ಬಹಳ ವ್ಯಾಪಕವಾಗಿ ಹರಡಿ ದುಶ್ಚಟವಾಗಿ ಪರಿಣಮಿಸಿ ಯುವ ಪೀಳಿಗೆಯನ್ನು ಸೆಳೆದು ದಾರಿ ತಪ್ಪಿಸುತ್ತಿದೆ. ಮೋಜಿನೊಂದಿಗೆ ಯುವಕರನ್ನು ಆನ್‌ಲೈನ್ ಗೇನ್‌ಗಳು ತನ್ನತ್ತ ಎಳೆದು ಮೆಸಮರೈಜ್ ಮಾಡುತ್ತಿವೆ. ಯಾರೇ ಏನೇ ಹೇಳಿದರೂ ಮಾತು ಕೇಳದ ಹಾಗೆ ಗೇಮ್‌ಗಳು ಅವರನ್ನು ಆಕರ್ಷಿತಗೊಳಿಸಿವೆ. ಇದರಿಂದ ಕೇಲ ಯುವಕರು ಆನ್ ಲೈನ್ ಸಹವಾಸದಿಂದ ಮನೆ ಹೊಲ ಮಾರಿಕೊಂಡು ಬೀದಿಗೆ ಬಂದ ಅನೇಕ ಉದಾಹರಣೆಗಳು ಇವೆ. ದೇಶದಲ್ಲಿಯೇ ಹೆಚ್ಚು ಯುವಕರು ಈ ಆನ್‌ಲೈನ್ ಚಟಕ್ಕೆ ಬಿದ್ದು ಸಾಲ ಮಾಡಿ ವಾರಕ್ಕೆ ಬಡ್ಡಿ ಚಕ್ರ



ಬಡ್ಡಿ ಅಂತ ಸಾಲಗಾರ ಕಾಟ ತಡಿಯಲಾರದೆ ಮನೆ ಬಿಟ್ಟು ಹೋಗಿದ್ದಾರೆ.ಈ ಚಟ ತಂದೆ ತಾಯಿಗಳೀಗೆ ಆತಂಕವನ್ನು ಸೃಷ್ಟಿ ಮಾಡಿದೆ. ಮರ್ಯಾದೆಗೆ ಅಂಜಿ ಹಿರಿಯರು ಮಾಡಿದ ಅಲ್ಪಸ್ವಲ್ಪ ಆಸ್ತಿಯನ್ನು ಮಾರಿ ಜೀವನ ಕಳೆಯುತ್ತಿದ್ದಾರೆ. ಇವರಂತೆ ಯಾರು ಆಗಬಾರದು ಅಂದರೆ ಈ ಆನ್‌ಲೈನ್ ನಿಷೇಧ ಅನಿವಾರ್ಯವಾಗಿತ್ತು. ಅದೇ ತರಹ ಸಾಲ ಮಾಡಿ ಗೆಲ್ಲಬೇಕು ಎಂದು ಮತ್ತೆ ಮತ್ತೆ ಆಡಿ ಸಾಲ ತೀರಿಸಲಾಗದೆ ದೇಶಾದ್ಯಂತ ಅನೇಕರು ನೇಣಿಗೆ ಶರಣಾಗಿದ್ದಾರೆ. ಇದನ್ನೆಲ್ಲ ಮನಗಂಡ ಕೇಂದ್ರದ ಸರ್ಕಾರ ಆನ್‌ಲೈನ್ ಗೇಮ್ ನಿಷೇಧ ಮಾಡಿರುವುದು ಸ್ವಾಗತಾರ್ಹವಾಗಿದೆ ಎಂದು ಹೇಳಿದಾರೆ.

# ಜೂಜಾಟ: 8 ಜನರ ಬಂಧನ

**ಕಲಬುರಗಿ,ಆ.23–**ತಾಲ್ಲೂಕಿನ ಮೇಳಕುಂದಾ (ಕೆ) ಗ್ರಾಮದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ಮೃತ್ಯುಂಜಯ, ಯಲ್ಲಪ್ಪ, ಅಶೋಕ ಕಟಕೆ, ಶಿವುಕುಮಾರ, ನಾಗರಾಜ, ಸನೀಲಕುಮಾರ ಅವರು ದಾಳಿ ನಡೆಸಿ 8 ಜನ ಜೂಜುಕೋರರನ್ನು ಬಂಧಿಸಿದ್ದಾರೆ.

ರಾಮಯ್ಯ ಗುತ್ತೇದಾರ, ರವಿ ದೊಡ್ಡಮನಿ, ಮಡಿವಾಳ ಬಿಲಗುಂದಿ, ಆನಂದ ಜಮಾದಾರ, ಸಿದ್ದು ಕುಂಬಾರ, ಮಲ್ಲಿಕಾರ್ಜುನ ಹಡಪದ, ಗಂಗಪ್ಪ, ಲಕ್ಷ್ಮಣ ಜೋಗನ್ಕಾರ್ ಎಂಬುವವರನ್ನು ಬಂಧಿಸಿ 11,530 ರೂ.ನಗದು ಜಪ್ತಿ ಮಾಡಿದ್ದಾರೆ. ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಧರ್ಮದ ವಿಚಾರದಲ್ಲಿ ರಾಜಕಾರಣ ಬೇಡ, ಸರ್ಕಾರ ನಿಷ್ಪಕ್ಷವಾದ ತನಿಖೆ ನಡೆಸಲಿದೆ : ಡಿಕೆಶಿ

**ಬೆಂಗಳೂರು, ಆ.23–** ಧರ್ಮದ ವಿಚಾರದಲ್ಲಿ ಯಾರೂ ರಾಜಕಾರಣ ಮಾಡಬಾರದು. ಸರ್ಕಾರ ನಿಷ್ಪಕ್ಷವಾದ ತನಿಖೆ ನಡೆಸಲಿದೆ. ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ನಗರದಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಧರ್ಮಸ್ಥಳದ ವಿಚಾರದಲ್ಲಿ ಆರಂಭದಲ್ಲಿ ಬಿಜೆಪಿಯವರು ಏನನ್ನೂ ಮಾತನಾಡಿರಲಿಲ್ಲ. ಅಡ್ಡಗೋಡೆಯ ಮೇಲೆ ದೀಪ ಇಟ್ಟಂತೆ ಮಾತನಾಡುವ ಕೆಲಸ ಮಾಡಿದರು. ನಾನು ಷಡ್ಯಂತ್ರ ನಡೆದಿದೆ ಎಂದು ಹೇಳಿದ ಮೇಲೆ ಈಗ ಚರ್ಚೆ ಮಾಡುತ್ತಿದ್ದಾರೆ ಎಂದರು.

ನನಗೆ ಮೊದಲಿನಿಂದಲೂ ನಂಬಿಕೆಯಿತ್ತು. ಆದರೂ ತನಿಖೆಗೆ ಯಾವತ್ತೂ ಅಡ್ಡಿ ಪಡಿಸಲಿಲ್ಲ. ಧರ್ಮಸ್ಥಳದ ಕುಟುಂಬದವರೇ ಖುದ್ದು ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ ಎಸ್‌ಐಟಿ ತನಿಖೆಯವರನ್ನು ಸ್ವಾಗತಿಸಿದರು.ವಿಚಾರಣೆ ನಡೆಯುತ್ತಿದ್ದು, ಯಾರೆಲ್ಲ ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳುತ್ತೆವೆ ಎಂದು ನಮ ಸರ್ಕಾರ ಮೊದಲಿನಿಂದಲೂ ಹೇಳುತ್ತಾ ಬಂದಿದೆ.

ಗೃಹಸಚಿವರು ಈ ಬಗ್ಗೆ ಹೇಳಿಕೆ ನೀಡಿದ್ದಾರೆ. ಮುಖ್ಯಮಂತ್ರಿ ಅವರು ವಿಧಾನಸಭೆ ಮತ್ತು ಕಾಂಗ್ರೆಸ್ ಶಾಸಕಾಂಗ ಸಭೆಗಳಲ್ಲಿ ಸ್ಪಷ್ಟವಾಗಿ ತಿಳಿಸಿದ್ದಾರೆ. ನಾವು ಅವರು ಅಥವಾ ಇವರು ಎಂಬ ಯಾರ ಪರವೂ ಇಲ್ಲ. ನ್ಯಾಯದ ಪರವಾಗಿ ಇದ್ದೇವೆ. ಧರ್ಮದಲ್ಲಿ ಯಾರೂ ರಾಜಕಾರಣ ಮಾಡಬಾರದು ಎಂದು ಹೇಳಿದರು.

ಅನನ್ಯಭಟ್ ವಿಚಾರವಾಗಿ ಗೊಂದಲದ ಹೇಳಿಕೆ ನೀಡುತ್ತಿರುವ ವ್ಯಕ್ತಿಗಳ ಕುರಿತು ಗೃಹ ಸಚಿವರು ಗಮನ ಹರಿಸುತ್ತಾರೆ ಎಂದು ತಿಳಿಸಿದರು.ಬಿಹಾರದಲ್ಲಿ ಲೋಕಸಭೆಯ ವಿರೋಧ ಪಕ್ಷದ ರಾಹುಲ್‌ಗಾಂಧಿ ನಡೆಸುವ ರಾಜಕೀಯ ಜಾಥಾದಲ್ಲಿ ಭಾಗವಹಿಸಲು ರಾಜ್ಯದಿಂದ ಕಾಂಗ್ರೆಸ್ಸಿನ ಶಾಸಕರ ತಂಡ ತೆರಳು



ತ್ತಿದೆ. ಬಹಳಷ್ಟು ಶಾಸಕರು ಬಿಹಾರದ ಯಾತ್ರೆಯಲ್ಲಿ ಭಾಗವಹಿಸುವ ಆಸಕ್ತಿಯನ್ನು ವ್ಯಕ್ತಪಡಿಸಿದರು. ಈ ಹಿನ್ನೆಲೆಯಲ್ಲಿ ಮೊದಲ ಹಂತದ ತಂಡದಲ್ಲಿ ಒಂದಷ್ಟು ಶಾಸಕರು ತೆರಳುತ್ತಿದ್ದಾರೆ. ವಿಮಾನದಲ್ಲಿ ಸ್ಥಳಾವಕಾಶ ಇರುವಷ್ಟು ಶಾಸಕರು ಪ್ರಯಾಣಿಸುತ್ತಿದ್ದು, ಎರಡನೇ ತಂಡದಲ್ಲಿ ಮತ್ತಷ್ಟು ಮಂದಿ ಭೇಟಿ ನೀಡಲಿದ್ದಾರೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಎಲ್ಲರೂ ಸಮಯ ವಾಕಾಶ ನೋಡಿಕೊಂಡು ಒಂದೊಂದು ದಿನ ಬಿಹಾರದ ವಿಧಾನಸಭೆ ಚುನಾವಣೆ ಪ್ರಚಾರದಲ್ಲಿ ತೊಡಗಿಸಿಕೊಳ್ಳುತ್ತಾರೆ. ನಾನೂ ಕೂಡ ಭೇಟಿ ನೀಡುತ್ತಿದ್ದೇನೆ ಎಂದರು.

ಚುನಾವಣೆಗಳ ಪೂರ್ವ ತಯಾರಿ ಬಗ್ಗೆ ಎಐಸಿಸಿ ಪ್ರಧಾನಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲ ಸಭೆ ನಡೆಸಿದ್ದಾರೆ. ನ್ಯಾಯಾಲಯ ಆದೇಶ ನೀಡಿದ ಮೇಲೆ ಚುನಾವಣೆ ನಡೆಸಬೇಕು. ಚುನಾವಣಾ ಜವಾಬ್ದಾರಿಗಳ ಬಗ್ಗೆ ಸುರ್ಜೇವಾಲ ಸಭೆ ನಡೆಸಿ, ನಾಯಕರಿಗೆ ಜವಾಬ್ದಾರಿ ಹಂಚಿದ್ದಾರೆ ಎಂದು ತಿಳಿಸಿದರು.

# 70 ಗಂಟೆಗಳ ಕಾಲ ನಡೆದ ಮಳೆಗಾಲದ ವಿಧಾನಸಭೆ ಅಧಿವೇಶನ

**ಬೆಂಗಳೂರು, ಆ.23–**ನಿನ್ನೆ ಮುಕ್ತಾಯಗೊಂಡ ಮಳೆಗಾಲದ ವಿಧಾನಸಭೆಯ ಅಧಿವೇಶನದಲ್ಲಿ ಒಟ್ಟು 70 ಗಂಟೆಗಳ ಕಾಲ ಕಾರ್ಯಕಲಾಪಗಳು ಜರುಗಿವೆ. ಈ ಬಾರಿಯ ಅಧಿವೇಶನದ ವಿಶೇಷತೆಯೆಂದರೆ ಬೆಳಿಗ್ಗೆಯಿಂದ ರಾತ್ರಿಯವರೆಗೂ ಅಧಿವೇಶನ ನಡೆಸಲಾಗಿದೆ.

ಹೆಚ್ಚು ಪ್ರತಿಭಟನೆ ಹಾಗೂ ಸಭಾತ್ಯಾಗದಂತಹ ಘಟನೆಗಳಿಲ್ಲದೆ, ಸುಗಮವಾಗಿ ಕಾರ್ಯಕಲಾಪ ಜರುಗಿವೆ. ವಿಧಾನಸಭೆಯ ಇತಿಹಾಸದಲ್ಲೆ? ಮೊದಲ ಬಾರಿಗೆ ಅತಿ ಹೆಚ್ಚು ಅಂದರೆ 39 ವಿಧೇಯಕಗಳು ಅಂಗೀಕಾರಗೊಂಡಿವೆ ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಸದನದಲ್ಲಿ ನಿನ್ನೆ ಪ್ರಕಟಿಸಿದರು.

ಧನ ವಿನಿಯೋಗ ವಿಧೇಯಕ, ಸೌಹಾರ್ದ ಸಹಕಾರಿ ತಿದ್ದುಪಡಿ, ನೋಂದಣಿ ತಿದ್ದುಪಡಿ ವಿಧೇಯಕ ಸೇರಿದಂತೆ ಪ್ರಮುಖ ವಿಧೇಯಕಗಳು ಸಮಗ್ರ ಚರ್ಚೆಯಾಗಿ ಅನುಮೋದನೆಗೊಂಡಿವೆ. ಆ.11ರಿಂದ ಆ.22ರವರೆಗೆ ಒಟ್ಟು 9 ದಿನಗಳ ಕಾಲ ಸದನದ ಕಾರ್ಯ ಕಲಾಪಗಳು ನಡೆದಿವೆ ಎಂದು ಅವರು ಹೇಳಿದರು.

ಮೊದಲ ದಿನ ಅಗಲಿದ ಗಣ್ಯರಿಗೆ ಸಂತಾಪ ಸಲ್ಲಿಸಲಾಗಿದೆ. ಬಿಜೆಪಿ ಶಾಸಕರ ಅಮಾನತು ಆದೇಶ ವಾಪಸ್ಸು ಪಡೆದಿರುವುದನ್ನು ಸ್ಥಿರೀಕರಿಸಲಾಗಿದೆ. ಕಾರ್ಯದರ್ಶಿಗಳ ವರದಿ ಮಂಡನೆ, ಪೂರಕ ಅಂದಾಜಿಗೆ ಅನುಮೋದನೆ, ವಿವಿಧ ಸ್ಥಾಯಿ ಸಮಿತಿಗಳ ವರದಿ ಮಂಡನೆ, ಸ್ಥಾಯಿ ಸಮಿತಿಗಳಿಗೆ ಸದಸ್ಯರ ನಾಮ ನಿರ್ದೇಶನ ಮಾಡುವ ಅಧಿಕಾರವನ್ನು ಸಭಾಧ್ಯಕ್ಷರಿಗೆ ನೀಡಲಾಗಿದೆ ಎಂದು ಅವರು ತಿಳಿಸಿದರು.ಜನಸಂದಣಿ ನಿಯಂತ್ರಣ ವಿಧೇಯಕ ಸೇರಿದಂತೆ ಕೆಲವು ವಿಧೇಯಕಗಳನ್ನು ಸಮಗ್ರ ಪರಿಶೀಲನೆಗೆ ಸದನ ಸಮಿತಿಗೆ ವಹಿಸಲಾಗಿದೆ. ಒಟ್ಟು 35 ಅರ್ಜಿಗಳನ್ನು



ಸ್ವಿಕರಿಸಲಾಗಿದೆ. 142 ವಾರ್ಷಿಕ ವರದಿಗಳು, 5 ಅನುಪಾಲನ ವರದಿಗಳು 6 ಅನುಸರಣಾ ವರದಿಗಳನ್ನು ಮಂಡಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಸದನದಲ್ಲಿ 128 ಪ್ರಶ್ನೆಗಳಿಗೆ ಉತ್ತರಿಸಲಾಗಿದ್ದು, 1662 ಪ್ರಶ್ನೆಗಳಿಗೆ ಲಿಖಿತ ಉತ್ತರ ಒದಗಿಸಲಾಗಿದೆ. ನಿಯಮ 351ರಡಿ 90 ಸೂಚನೆಗಳಿಗೆ ಹಾಗೂ 178 ಗಮನ ಸೆಳೆಯುವ ಸೂಚನೆಗಳಿಗೆ ಉತ್ತರ ಒದಗಿಸಲಾಗಿದೆ. ಶೂನ್ಯವೇಳೆಯಲ್ಲಿ 13 ವಿವಿಧ ವಿಷಯಗಳನ್ನು ಪ್ರಸ್ತಾಪಿಸಲಾಗಿದೆ ಎಂದು ಅವರು ಹೇಳಿದರು.

ಸುಗಮ ಕಾರ್ಯಕಲಾಪ ನಡೆಸಲು ಸಹರಿಸಿದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಸಚಿವರು, ವಿರೋಧ ಪಕ್ಷದ ನಾಯಕರು, ಸಚೇತಕರು, ಶಾಸಕರು, ಅಧಿಕಾರಿಗಳು, ಸಿಬ್ಬಂದಿ ಹಾಗೂ ಮಾಧ್ಯಮದವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ಖಾದರ್ ತಿಳಿಸಿದರು.

# ಗೌರಿ–ಗಣೇಶ ಹಬ್ಬಕ್ಕೆ ಕೆಎಸ್‌ಆರ್‌ಟಿಸಿಯಿಂದ 1500 ವಿಶೇಷ ಬಸ್ ಸೇವೆ

**ಬೆಂಗಳೂರು,ಆ.23–** ಗೌರಿ–ಗಣೇಶ ಹಬ್ಬದ ಪ್ರಯುಕ್ತ ಪ್ರಯಾಣಿಕರ ಅನುಕೂಲಕ್ಕಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ 1500 ವಿಶೇಷ ಬಸ್ ವ್ಯವಸ್ಥೆ ಕಲ್ಪಿಸಿದೆ.ಹಬ್ಬದ ಸಂದರ್ಭದಲ್ಲಿ ಉಂಟಾಗುವ ಪ್ರಯಾಣಿಕರ ದಟ್ಟಣೆಯನ್ನು ಕಡಿಮೆ ಮಾಡುವ ಉದ್ದೇಶದಿಂದ ಇದೇ 25 ಮತ್ತು 26 ರಂದು ಬೆಂಗಳೂರಿನಿಂದ ವಿವಿಧ ಸ್ಥಳಗಳಿಗೆ ಹಾಗೂ 27 ಮತ್ತು 31 ರಂದು ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ಈ ವಿಶೇಷ ಬಸ್‌ಗಳು ಸಂಚರಿಸಲಿವೆ.

ಹಬ್ಬಕ್ಕೆ ಊರಿಗೆ ತೆರಳುವವರ ಸಂಖ್ಯೆ ಅಧಿಕವಾಗಿರುವುದರಿಂದ ಈ ವಿಶೇಷ ಬಸ್‌ಗಳ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಕೆಎಸ್‌ಆರ್‌ಟಿಸಿ ತಿಳಿಸಿದೆ.ಕರ್ನಾಟಕ ಸಾರಿಗೆ, ರಾಜಹಂಸ, ಸ್ಲಿಪರ್‌ಕೋಚ್, ಐರಾವತ, ಐರಾವತ ಕ್ಲಬ್‌ಕ್ಲಾಸ್, ಇವಿ ಪವರ್ ಪ್ಲಸ್, ಅಂಬಾರಿ ಕ್ಲಬ್ ಕ್ಲಾಸ್, ಅಂಬಾರಿ ಉತ್ಸವ್ ಹಾಗೂ ಪಲ್ಲಕ್ಕಿ ಸಾರಿಗೆ ಸೇವೆಗಳ ಜೊತೆಗೆ ಹೆಚ್ಚುವರಿ ಬಸ್‌ಗಳ ಸಂಚಾರ ಇರಲಿದೆ.

**ಯಾವ ನಿಲ್ದಾಣದಿಂದ, ಎಲ್ಲಿಗೆ ಬಸ್‌ಗಳು :**

ಕೆಂಪೇಗೌಡ ಬಸ್ ನಿಲ್ದಾಣದಿಂದ ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯ, ಶಿವಮೊಗ್ಗ, ಹಾಸನ, ಮಂಗಳೂರು, ಕುಂದಾಪುರ, ಶೃಂಗೇರಿ, ಹೊರನಾಡು, ದಾವಣಗೆರೆ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗಿರಿ, ಬೀದರ್, ತಿರುಪತಿ, ವಿಜಯವಾಡ, ಹೈದ್ರಾಬಾದ್ ಸೇರಿದಂತೆ ಮುಂತಾದ ಸ್ಥಳಗಳಿಗೆ ವಿಶೇಷ ಬಸ್‌ಗಳ ಸೇವೆ ದೊರೆಯಲಿದೆ.

ಮೈಸೂರು ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜ್‌ಪೇಟೆ, ಕುಶಾಲ್‌ನಗರ, ಮಡಿಕೇರಿ ಮಾರ್ಗದ ಕಡೆ ಬಸ್‌ಗಳು ಸಂಚರಿಸಲಿವೆ.ತಮಿಳುನಾಡು ಮತ್ತು ಕೇರಳ ಕಡೆಗೆ ಮಧುರೈ, ಕುಂಭಕೋಣಂ, ಚನ್ನೈ, ಕೊಯಮೊತ್ತೂರ್, ತಿರುಚಿ, ಪಾಲ್ಕಾಡ್, ತ್ರಿಶೂರ್, ಏರ್ನಾಕುಲಂ, ಕೋಯಿಕೋಡ್, ಕ್ಯಾಲಿಕಟ್ ಮುಂತಾದ ಸ್ಥಳಗಳಿಗೆ ತೆರಳುವ ಪ್ರತಿಷ್ಠಿತ ಸಾರಿಗೆಗಳು ಶಾಂತಿನಗರದಲ್ಲಿರುವ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದಿಂದ ಸಂಚರಿಸಲಿವೆ.

**ಬುಕ್ಕಿಂಗ್ ಪ್ರಾರಂಭ :** ಹೆಚ್ಚುವರಿ ಬಸ್‌ಗಳಲ್ಲಿ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯ ಕಲ್ಪಿಸಲಾಗಿದೆ. ಕರ್ನಾಟಕ ಮತ್ತು ಹೊರರಾಜ್ಯಗಳ ಬುಕ್ಕಿಂಗ್ ಕೌಂಟರ್‌ಗಳಲ್ಲಿ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸಬಹುದು.ಈ ಟಿಕೆಟ್ ಬುಕ್ಕಿಂಗ್ ಅನ್ನು ವೆಬ್‌ಸೈಟ್ ಮುಖಾಂತರ ಮಾಡಬಹುದಾಗಿದೆ.

4 ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೆಟ್‌ಗಳನ್ನು ಕಾಯ್ದಿರಿಸಿದಲ್ಲಿ ಶೇ.5 ರಷ್ಟು ರಿಯಾಯಿತಿ



ದೊರೆಯಲಿದೆ. ಜೊತೆಗೆ ಹೋಗುವ ಮತ್ತು ಬರುವ ಪ್ರಯಾಣದ ಟಿಕೆಟ್ ಅನ್ನು ಒಟ್ಟಿಗೆ ಕಾಯ್ದಿರಿಸಿದರೆ ಶೇ.10 ರಷ್ಟು ರಿಯಾಯಿತಿ ನೀಡಲಾಗುವುದು. ನಿಗಮದ ಕಾರ್ಯಾಚರಣೆ ವ್ಯಾಪ್ತಿಯಲ್ಲಿರುವ ಎಲ್ಲಾ ತಾಲ್ಲೂಕು, ಜಿಲ್ಲಾ ಕೇಂದ್ರಗಳ ಬಸ್ ನಿಲ್ದಾಣಗಳಿಂದ ಪ್ರಯಾಣಿಕರ ಹಾಗೂ ಸಂಚಾರ ಒತ್ತಡಕ್ಕನುಗುಣವಾಗಿ ವಿಶೇಷ ಬಸ್ ಕಾರ್ಯಾಚರಣೆ ಮಾಡಲಾಗುವುದು ಎಂದು ಕೆಎಸ್‌ಆರ್‌ಟಿಸಿ ಪ್ರಕಟಣೆಯಲ್ಲಿ ತಿಳಿಸಿದೆ.

## ಎಸ್‌ಐಟಿ ವರದಿ ಬಳಿಕ ಸತ್ಯಾಂಶ



**ಬೆಂಗಳೂರು.ಆ23–** ಧರ್ಮಸ್ಥಳದಲ್ಲಿ ನೂರಾರು ಶವ ಹೂತಿಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ತಂಡ ವರದಿ ನೀಡಿದ ಬಳಿಕ ಸತ್ಯಾಂಶ ಬಹಿರಂಗವಾಗಲಿದೆ ಎಂದು ಗೃಹ ಸಚಿವ ಡಾ. ಪರಮೇಶ್ವರ್ ತಿಳಿಸಿದರು. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮಾಸ್ಕ್ ಮ್ಯಾನ್ ನನ್ನು ಸಂಶಯ ಬಂದು ವಶಕ್ಕೆ ತಗೊಂಡಿದ್ದಾರಾ ಅಥವಾ ಯಾವ ಉದ್ದೇಶದಿಂದ ಅವನನ್ನು ವಶಕ್ಕೆ ವಶಕ್ಕೆ ತೆಗೆದುಕೊಂಡಿದ್ದರೋ ಅವರಿಗೆ ಗೊತ್ತು. ದೂರುದಾರನ ಆಧಾರದ ಮೇಲೆ ನಾವು ತನಿಖೆ ಪ್ರಾರಂಭ ಮಾಡಿದ್ದೇವೆ ಈಗ ಅವರನ್ನು ಅರೆಸ್ಟ್ ಮಾಡಿ ಅವನ ಹೇಳಿಕೆ ಆಧಾರದ ಮೇಲೆ ತನಿಖೆ ಮುಂದುವರಿಯುತ್ತದೆ. ಅವರು ಹೇಳಿದ್ದನ್ನೆಲ್ಲ ನಾನು ನಿಮಗೆ ಹೇಳೋಕೆ ಆಗಲ್ಲ ಎಂದರು.

ಮಾಸ್ಕ್ ಮ್ಯಾನ್ ಅರೆಸ್ಟ್ ಆಗಿರೋದು ಅಂತ ಅಷ್ಟೇ ಗೊತ್ತು ಅದನ್ನೇ ಹೇಳಿದ್ದೇನೆ ಎಸ್ ಐ ಟಿ ಅವರು ಏನು ಹೇಳಿದರು ಅದನ್ನು ಹೇಳಕ್ಕೆ ಆಗಲ್ಲ. ತನಿಖೆ ಆಗುವಾಗ ಯಾವುದೇ ಮಾಹಿತಿ ಹೇಳಬಾರದು. ಎಸ್‌ಐಟಿ ಅಧಿಕಾರಿಗಳಿಗೆ ತನಿಖೆ ಕೊಟ್ಟ ಮೇಲೆ ಯಾವ ರೀತಿಯಲ್ಲಿ ತನಿಖೆ ಮಾಡಬೇಕು ಎಂದು ನಾವು ಅವರಿಗೆ ಹೇಳಲು ಆಗಲ್ಲ ಎಸ್‌ಐಟಿ ವರದಿ ಬಂದ ಬಳಿಕವಷ್ಟೇ ಸತ್ಯ ಹೊರಗಡೆ ತರಬೇಕು. ಸತ್ಯ ಹೊರಗಡೆ ಬರಲು ಮಾಸ್ಕ್ ಮ್ಯಾನ್ ಗೆ ಯಾವ ಮೆಥಡ್ ಬಳಸುತ್ತಾರೆ ಅದನ್ನು ನಾವು ಹೇಳೋಕ್ ಆಗಲ್ಲ ಅದು ಎಸ್‌ಐಟಿ ಅಧಿಕಾರಿಗಳಿಗೆ ಬಿಟ್ಟ ವಿಚಾರ ಎಂದು ತಿಳಿಸಿದರು.

# ಕ್ರೀಡೆ ಮಾನಸಿಕ ಹಾಗೂ ದೈಹಿಕ ಆರೋಗ್ಯಕ್ಕೆ ಸಹಕಾರಿ:ಸುಬೇದಾರ




**ಯಡ್ರಾಮಿ:ಅ.23–**ಪಠ್ಯದೊಂದಿಗೆ ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದು ವಿದ್ಯಾರ್ಥಿಗಳ ಮಾನಸಿಕ ಹಾಗೂ ದೈಹಿಕ ಆರೋಗ್ಯಕ್ಕೆ ಸಹಕಾರಿಯಾಗಲಿದೆ ಎಂದು ಯಲ್ಲಪ್ಪ ಸಭೇದಾರ ತಹಸೀಲ್ದಾರ ಯಡ್ರಾಮಿ ಅವರು ಹೇಳಿದರು.

ತಾಲ್ಲೂಕಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಯಡ್ರಾಮಿ ತಾಲೂಕು ಮಟ್ಟದ ದಸರಾ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.'ಕ್ರೀಡೆಯಲ್ಲಿ ಸೋಲು ಗೆಲುವು ಸಹಜ. ಕ್ರೀಡಾಪಟುಗಳು ಕ್ರೀಡಾ ಮನೋಭಾವದಿಂದ ಆಟವಾಡಿದರೆ ಗೆಲುವು ಸಿಕ್ಕೇ ಸಿಗುತ್ತದೆ' ಎಂದರು.

ಕ್ರೀಡಾ ಪ್ರತಿಭೆಗಳು ಈ ಹಂತದಿಂದ ರಾಜ್ಯ, ರಾಷ್ಟ್ರ ಮಟ್ಟದವರೆಗೆ ಸಾಗಿ ಎಲ್ಲರಿಗೂ ಗೌರವ ತರಬೇಕು' ಎಂದು ಸಲಹೆ ನೀಡಿದರು.ಕ್ರೀಡೆಯಲ್ಲಿ ಕ್ರೀಡಾಪಟುಗಳು ದೈಹಿಕ ಶಿಕ್ಷಕರು ನೀಡಿದ ನಿರ್ಣಯಕ್ಕೆ ಬದ್ದರಾಗಿರಬೇಕು ಎಂದು ಪ್ರತಿಜ್ಞಾವಿಧಿ ಭೋದಿಸಿದರು.

ಅಥ್ಲೇಟಿಕ್ಸ್ ವಾಲಿಬಾಲ ಫುಟಬಾಲ ಖೋಖೋ ಕಬಡ್ಡಿ ಥ್ರೋಬಾಲ್ ಪಂಧ್ಯಾವಳಿಯಲ್ಲಿ ಪ್ರಥಮ ಹಾಗೂ ದ್ವೀತಿಯ ಬಂದ ಕ್ರೀಡಾಪಟುಗಳಿಗೆ ಪ್ರಶಸ್ತಿ ಪತ್ರ ಪ್ರದಾನ ಮಾಡಲಾಯಿತ್ತು.

ಯಡ್ರಾಮಿ ತಾಲೂಕು ಮಟ್ಟದಲ್ಲಿ ಗೆದ್ದ ಕ್ರೀಡಾಪಟುಗಳು ಜಿಲ್ಲಾ ಆಯ್ಕೆಯಾಗಿದ್ದು ಸೆ:29 ನಡೆಯಲಿದ್ದು ಜಿಲ್ಲಾ ಕ್ರೀಡಾಕೂಟದಲ್ಲಿ ಬಾಗವಹಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಯಲ್ಲಪ್ಪ ಸುಭೇದಾರ ದಂಡಾಧಿಕಾರಿಗಳು ಯಡ್ರಾಮಿ,ಆರಕ್ಷಕ ಉಪನಿರಿಕ್ಷಕರು ವಿಶ್ವನಾಥ ಮುದರಡ್ಡಿ ಪೊಲೀಸ್ ಠಾಣೆ ಯಡ್ರಾಮಿ,ಶಿವಕುಮಾರ ಎಸ್ ಡಂಬಳ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ತಾಲೂಕು ಅಧ್ಯಕ್ಷರು ಯಡ್ರಾಮಿ, ಸಂಗಮೇಶ ಕೊಂಬಿನ ಕೋಕೋ ಅಥ್ಲಟಿಕ್ಸ್ ತರಬೇತುದಾರರು ಜೇವರ್ಗಿ, ಬಸವರಾಜ ಪಾಟೀಲ ಯತ್ನಾಳ ಮುಖ್ಯಗುರುಗಳು ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಯಡ್ರಾಮಿ, ವಿಶ್ವನಾಥ ಮಾಗಣಗೇರಾ ಇತರರು ಉಪಸ್ಥಿತರಿದ್ದರು.

# ಹಬ್ಬಗಳ ಆಚರಣೆಯಲ್ಲಿ ಸೌಹಾರ್ದ ವಿರಲಿ

**ಕೆಂಭಾವಿ,ಅ.23–**ಪ್ರತಿಯೊಂದು ಹಬ್ಬಗಳಿಗು ತನ್ನದೇ ಆದ ಹಿನ್ನಲೆಯಿದೆ ಹಬ್ಬಗಳ ಆಚರಣೆಯಲ್ಲಿ ಇತರರ ಭಾವನೆಗಳಿಗೆ ಧಕ್ಕೆ ತರದಂತೆ ಭಾವೈಕ್ಯತೆ ಹಾಗೂ ಸೌಹಾರ್ದಯುತವಾಗಿ ಆಚರಿಸುವಂತೆ ಸುರಪುರ ವೃತ್ತ ಡಿ ವೈ ಎಸ್ ಪಿ ಜಾವೇದ್ ಇನಾಮದಾರ್ ರವರು ಕರೆ ನೀಡಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಗಣೇಶೋತ್ಸವ ಮತ್ತು ಈದ್ ಮಿಲಾದ್ ಹಬ್ಬದ ಆಚರಣೆ ನಿಮಿತ್ಯ ಶುಕ್ರವಾರ ಕರೆದ ಸೌಹಾರ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರುಗಣೇಶ ಉತ್ಸವ ಮತ್ತು ಈದ್ ಮಿಲಾದ್ ಎರಡೂ ಹಬ್ಬಗಳು ಹೆಚ್ಚುಕಮ್ಮಿ ವಾರಹತ್ತು ದಿನಗಳಲ್ಲಿ ಬಂದಿವೆ. ಪ್ರತಿಯೊಂದು ಹಬ್ಬ ಹರಿದಿನಗಳಾಗಲಿ, ಆಚರಣೆಗಳಾಗಲಿ ತನ್ನದೆಯಾದ ಚಾರಿತ್ರಿಕ ಮತ್ತು ಧಾರ್ಮಿಕ ಹಿನ್ನೆಲೆ ಹೊಂದಿರುತ್ತವೆ. ಅವುಗಳ ಮಹತ್ವ ಅರಿತಾಗ ಆಚರಣೆಯಲ್ಲಿ ಸಾರ್ವತ್ರಿಕ ಸಂಭ್ರಮ ಕಾಣಬಹುದು. ಅದೇ ರೀತಿ ಮುಂಬರುವ ಗಣೇಶೋತ್ಸವ ಮತ್ತು ಈದ್ ಮಿಲಾದ್ ಹಬ್ಬವನ್ನು ಬೇಧವಿಲ್ಲದೆ ಇಲಾಖೆಯ ನಿಯಮಗಳಿಗೆ ಸಹಕರಿಸಿ ಎಲ್ಲರೂ ಭಾಗವಹಿಸುತ್ತಾ ಸ್ನೇಹ ಮತ್ತು ಸೌಹಾರ್ದತೆಯಿಂದ ಅಹಿತಕರ ಘಟನೆಗೆ ಆಸ್ಪದ ನೀಡದೆ ಸಂಭ್ರಮಿಸುವಂತೆ ತಿಳಿಸಿದರು.

ಸಿಪಿಐ ರವಿಕುಮಾರ ಮಾತನಾಡಿ ಭಾರತ ನೆಲದಲ್ಲಿ ಆಚರಿಸುವ ಪ್ರತಿಯೊಂದು ಹಬ್ಬವನ್ನ ಜಾತಿ ಧರ್ಮದ ಹೆಸರಿನಲ್ಲಿ ವಿಂಗಡಣೆ ಮಾಡದೆ ಪ್ರತಿಯೊಂದು ಹಬ್ಬಗಳನ್ನು ಭಾವೈಕ್ಯ ಭಾವದಿಂದ ಭಾರತೀಯ ಹಬ್ಬವಾಗಿ ಆಚರಿಸಬೇಕು ಅಂದಾಗ ಮಾತ್ರ ನಮ್ಮಲ್ಲಿ ಸೌಹಾರ್ದತೆ ಮೂಡಲು ಸಾಧ್ಯ ಎಂದು ತಿಳಿಸಿದರು.ಪಿ ಎಸ್ ಐ ಅಮೋಜ ಕಾಂಬಳೆ ಪ್ರಾಸ್ತಾವಿಕ ಮಾತನಾಡಿ, ಈದ್ ಮಿಲಾದ್ ಹಬ್ಬವು ಕೊನೆಯ ಪ್ರವಾದಿ ಮಹಮ್ಮದ್ ಸಲ್ಲಲ್ಲಾಹು ಅಲಹಿವ ಸಲ್ಲಮ್ಮರ ಜನ್ಮದಿನವಾಗಿದ್ದು, ಈ ನಾಡಿನಲ್ಲಿ ಎಲ್ಲಾ ಶರಣರು




ಸಂತರು ಪ್ರವಾದಿಗಳು ದೇವನೊಬ್ಬ ನಾಮ ಹಲವು ಎನ್ನುವಂತೆ ಜನಮನದಲ್ಲಿ ಐಕ್ಯತೆಯನ್ನು ಬಿತ್ತಿ ತಮ್ಮ ಸಂದೇಶದ ಮೂಲಕ ಶಾಂತಿ, ಕರುಣೆಯನ್ನು ಸಾರಿದ್ದಾರೆ. ಆಚರಣೆಯ ಮೂಲಕ ಅವರ ಆದರ್ಶಗಳು ನಮಗೆ ಬದುಕಿಗೆ ಹಾಸುಹೊಕ್ಕಾಗಬೇಕು. ಎರಡೂ ಹಬ್ಬಗಳ ಆಚರಣೆಯಲ್ಲಿ ಮೇಲಾಧಿಕಾರಿಗಳ ನಿರ್ದೇಶನದಂತೆ ಉತ್ಸವ ಸಮಿತಿಯವರು ವಹಿಸಿಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಹಾಗೂ ನಿಯಮಗಳ ಕುರಿತು ತಿಳಿಸಿದರು. ಕ್ರೈಮ್ ಪಿಎಸ್‌ಐ ಹಣಮಂತ್ರಾಯ ಸಿದ್ದಾಪುರ ವಂದನಾರ್ಪಣೆ ತಿಳಿಸಿದರು. ಸಭೆಯಲ್ಲಿ ದೇವಿಂದ್ರ ವಠಾರ್, ಆದಮ್ ಖಾಜಿ, ಪರಶುರಾಮ ಬಳಬಟ್ಟಿ, ಗುರುಲಿಂಗ ಸೇರಿದಂತೆ ಹಲವರು ಮಾತನಾಡಿದರು. ಪ್ರಮುಖರಾದ ಪುರಸಭೆ ಅಧ್ಯಕ್ಷ ರಹೇಮಾನ ಪಟೇಲ್ ಯಲಗೋಡ್, ಕೃಷ್ಣರಡ್ಡಿ ಮುದನೂರ, ಖಾಜಾಪಟೇಲ್ ಕಾಚೂರ, ಶಿವಪ್ಪ ಕಂಬಾರ, ಮಡಿವಾಳಪ್ಪ ಕಿರದಹಳ್ಳಿ, ದಾವಲ್ ಸಾಬ್, ನಯೀಮ್ ಖಾಜಿ, ಮರೆಪ್ಪ ಮಲ್ಲಾ, ಸೇರಿದಂತೆ ವಲಯದ ವಿವಧ ಗ್ರಾಮಗಳ ಮುಖಂಡರು ಸಂಘಟನೆಯ ಪದಾಧಿಕಾರಿಗಳು ಠಾಣೆ ಸಿಬ್ಬಂದಿ ಇದ್ದರು.

## ನವೆಂಬರ್‌ನಲ್ಲಿ ಕೆಸೆಟ್–25ರ ಪರೀಕ್ಷೆ

**ಬೆಂಗಳೂರು, ಆ.23–**ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆಯು ನ.2ರಂದು ನಡೆಯಲಿದ್ದು, ಆನ್ ಲೈನ್ ಮೂಲಕ ಅರ್ಜಿ ಸಲ್ಲಿಕೆಗೆ ಆಹ್ವಾನಿಸಲಾಗಿದೆ. ಆನ್ ಲೈನ್ ಮೂಲಕ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಆ.28ರಿಂದ ಆರಂಭಗೊಳ್ಳಲಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಹೇಳಿದೆ. ಕೆಸೆಟ್–25ರ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಸೆ.18 ಕೊನೆಯ ದಿನವಾಗಿದ್ದು, ಅರ್ಜಿ ಶುಲ್ಕ ಪಾವತಿಗೆ ಸೆ.19ರವರೆಗೆ ಅವಕಾಶವಿರುತ್ತದೆ. ಅ.24ರಂದು ಪ್ರವೇಶ ಪತ್ರ ಬಿಡುಗಡೆ ಯಾಗಲಿದೆ. ಆನ್ ಲೈನ್ ಮೂಲಕ ಮಾತ್ರವೇ ಅರ್ಜಿ ಸಲ್ಲಿಸಬಹುದಾಗಿದ್ದು, ಇತರ ಯಾವುದೇ ವಿಧದಲ್ಲಿ ಅರ್ಜಿ ಸ್ವಿಕರಿಸುವುದಿಲ. ಒಟ್ಟು 33 ವಿಷಯಗಳಿಗೆ ಪರೀಕ್ಷೆ ನಡೆಯಲಿದೆ ಎಂದು ಕೆಇಎ ಪ್ರಕಟಣೆ ತಿಳಿಸಿದೆ.

**ಎಂಡಿಎಸ್: ಅರ್ಜಿ ಸಲ್ಲಿಸಲು ನಾಳೆ ಕಡೇ ದಿನ:**ಸ್ನಾತಕೋತ್ತರ ದಂತ ವೈದ್ಯಕೀಯ ಕೋರ್ಸ್‌ಗಳಿಗೆ ಲಭ್ಯವಿರುವ ಸೀಟುಗಳಿಗೆ ಸ್ಟ್ರೆ ವೇಕೆನ್ಸಿಸುತ್ತಿನ ಸೀಟು ಹಂಚಿಕೆ ಮಾಡುತ್ತಿದ್ದು, ಅರ್ಹರು ನಾಳೆಯೊಳಗೆ ಅರ್ಜಿ ಸಲ್ಲಿಸಬಹುದು ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ತಿಳಿಸಿದೆ. ಎಂಸಿಸಿಯು ಕನಿಷ್ಠ ಅರ್ಹತೆಯ ಅಂಕಗಳನ್ನು ಕಡಿಮೆ ಮಾಡಿದ್ದು, ಅರ್ಹರಾಗುವ ಅಭ್ಯರ್ಥಿಗಳು ಹೊಸದಾಗಿ ಅರ್ಜಿ ಸಲ್ಲಿಸಬಹುದು. ಈಗಾಗಲೇ ಅರ್ಜಿ ಸಲ್ಲಿಸಿರುವವರು ಕೂಡ ಭಾಗವಹಿಸಬಹುದು.ಮೂಲ ದಾಖಲೆಗಳ ಪರಿಶೀಲನೆ ಸಂಬಂಧ ನಂತರ ಮಾಹಿತಿ ನೀಡಲಾಗುವುದು ಎಂದು ಕೆಇಎ ಹೇಳಿದೆ.

**ಹೆಚ್ಚುವರಿ ಸೀಟ್ ಮ್ಯಾಟ್ರಿಕ್ಸ್ :** ಯುಜಿಸಿಇಟಿ/ನೀಟ್ ಪ್ರವೇಶ ಕುರಿತ ಎರಡನೇ ಸುತ್ತಿನ ಸೀಟು ಹಂಚಿಕೆಗೆ ಆಪ್ಷನ್‌ಗಳನ್ನು ಮರು ಕ್ರಮಗೊಳಿಸುವ ಪ್ರಕ್ರಿಯೆ ನಡೆಯುತ್ತಿದ್ದು, ಹೆಚ್ಚುವರಿ ಸೀಟ್ ಮ್ಯಾಟ್ರಿಕ್‌ಬಂದಿರುವ ಕಾರಣಕ್ಕೆ ಕೆಲವು ಕೋರ್ಸ್‌ಗಳಿಗೆ ಆಪ್ಷನ್ಸ್ ದಾಖಲಿಸುವುದಕ್ಕೂ ಅವಕಾಶ ನೀಡಲಾಗಿದೆ ಎಂದು ಕೆಇಎ ಪ್ರಕಟಣೆ ತಿಳಿಸಿದೆ. ಒಟ್ಟು 14 ಬಿಎಸ್‌ಸಿ ನರ್ಸಿಂಗ್, 12 ಆಯುರ್ವೇದ ಮತ್ತು ಎರಡು ಆರ್ಕಿಟೆಕ್ಚರ್ ಕಾಲೇಜುಗಳು ಹೆಚ್ಚುವರಿಯಾಗಿ ಸೀಟ್ ಮ್ಯಾಟ್ರಿಕ್‌ಗೆ ಸೇರ್ಪಡೆಯಾಗಿವೆ. ಈ ಕಾಲೇಜುಗಳಲ್ಲಿ ಪ್ರವೇಶ ಪಡೆಯಲು ಇಚ್ಛಿಸುವವರು ವೆಬ್‌ಸೈಟ್‌ನಲ್ಲಿ ಲಭ್ಯ ಸೀಟುಗಳ ಮಾಹಿತಿ ಪಡೆದು ಆಪ್ಷನ್ ದಾಖಲಿಸಬಹುದು ಎಂದು ಹೇಳಲಾಗಿದೆ.

# ಶಾಸಕ ಯತ್ನಾಳ ಹೇಳಿಕೆಗೆ ಖಂಡನೆ : ಖಾಜಾಹುಸೇನ್ ಮುಲ್ಲಾ

**ಕಲಬುರಗಿ ;ಅ.23–** ಇತ್ತೀಚೆಗೆ ಬಿಜಾಪುರ ನಗರ ಶಾಸಕ ಬಸಣಗೌಡ ಪಾಟೀಲ ಅವರು ಮುಸ್ಲಿಂ ಸಮುದಾಯದ ಹೆಣ್ಣುಮಕ್ಕಳು ಹಿಂದು ಧರ್ಮದ ಯುವಕರು ಮದುವೆ ಮಾಡಿಕೊಂಡರೆ ವಯಕ್ತಿಕವಾಗಿ 5 ಲಕ್ಷ ರೂಪಾಯಿ ನೀಡುತ್ತೇನೆ ಎಂದು ಹೇಳಿರುವು ಉಗ್ರವಾಗಿ ಖಂಡಿಸುತ್ತೇನೆ ಎಂದು ಫರಹತಾಬಾದ ಬ್ಲಾಕ್ ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಅದ್ಯಕ್ಷರಾದ ಖಾಜಾಹುಸೇನ ಮುಲ್ಲಾ ಹೇಳಿದರು.

ಖಾಸಗಿ ಹೋಟೆಲ್ ಒಂದರಲ್ಲಿ ಮಾದ್ಯಮದವರೊಂದಿಗೆ ಮಾತನಾಡಿದ ಅವರು, ನಾವು ಮುಸ್ಲಿಂ ಸಮುದಾಯಕ್ಕೆ ಸೇರಿದರು ಕೂಡಾ ಹಿಂದು, ಕ್ರಿಶ್ಚಿಯನ್ ಸೇರಿದಂತೆ ಅನೇಕ ಧರ್ಮಗಳ ಬಗ್ಗೆ ಅಪಾರ ಗೌರವವಿದೆ. ಸುಖಾ ಸುಮ್ಮನೆ ಬಸನಗೌಡ ಪಾಟೀಲರು ಪ್ರಚೋದನೆಕಾರಿ ಹೇಳಿಕೆ ನೀಡಿ ಸಮಾಜದಲ್ಲಿ ಅಶಾಂತಿ ಮೂಡಿಸುತ್ತಿರುವುದು ಒಳ್ಳೆಯ ಬೆಳವಣಿಗೆ ಅಲ್ಲ ಎಂದು ತಿಳಿಸಿದರು. ಮುಂದಿನ ದಿನಗಳಲ್ಲಿ ಆದರೂ, ಯತ್ನಾಳ ಅವರು ಅವರ ಕ್ಷೇತ್ರದ ಕಡೆ ಗಮನ ಹರಿಸಿ ಮತ ನೀಡಿದ ಮತದಾರರ ಕಷ್ಟ, ಕಾರ್ಪಣ್ಯಗಳಲ್ಲಿ ಆಲಿಸಿ ಪರಿಹಾರ ಕಲ್ಪಿಸುವ ಕೆಲಸ ಮಾಡಲೆಂದು ಅವರಿಗೆ ಕಿವಿ ಮಾತು ಹೇಳುತ್ತಿದ್ದೇನೆ ಎಂದು ಖಾಜಾ ಹುಸೇನ್ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದರು.ಸುದ್ದಿಗೋಷ್ಠಿಯಲ್ಲಿ ಸಮುದಾಯದ ಹಿರಿಯ ಮತ್ತು ಯುವಕರು ಉಪಸ್ಥಿತರಿದ್ದರು.

